

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 242 | ₹ ಬೆಲೆ: 4 | Saturday, 18, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ವಿಪಕ್ಷ ನಾಯಕನಾಗಿ ಬಿಜೆಪಿ ಶಾಸಕ ಆರ್ ಅಶೋಕ್ ಆಯ್ಕೆ

ಬೆಂಗಳೂರು: ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕನಾಗಿ ಬೆಂಗಳೂರಿನ ಪದ್ಮನಾಭ ನಗರ ಕ್ಷೇತ್ರದ ಶಾಸಕ ಆರ್ ಅಶೋಕ್ ಅವರನ್ನು ಬಿಜೆಪಿ ಹೈಕಮಾಂಡ್ ಆಯ್ಕೆ ಮಾಡಿದೆ.

ವಿಪಕ್ಷ ನಾಯಕನ ಆಯ್ಕೆ ವಿಚಾರವಾಗಿ ಪಕ್ಷದೊಳಗೆ ಅಸಮಾಧಾನ ಉಂಟಾಗಿರುವ ಹಿನ್ನೆಲೆಯಲ್ಲಿ ಶುಕ್ರವಾರ ಸಂಜೆ ನಡೆದ ಶಾಸಕಾಂಗ ಪಕ್ಷದ ಸಭೆಗೆ ವೀಕ್ಷಕರಾಗಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ದುಶ್ಯಂತ್ ಕುಮಾರ್ ಗೌತಮ್ ಆಗಮಿಸಿದ್ದರು.

ಶಾಸಕರ ಅಭಿಪ್ರಾಯಗಳನ್ನು ಆಲಿಸಿದ ವೀಕ್ಷಕರು ವಿರೋಧದ ನಡುವೆಯೂ ವಿಪಕ್ಷ ನಾಯಕನಾಗಿ ಆರ್ ಅಶೋಕ್ ಅವರನ್ನು ನೇಮಿಸಿದ್ದಾರೆ. ಇನ್ನು ಇದೇ



ವೇಳೆ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಆರ್ ಅಶೋಕ್ ಅವರು, ಪಕ್ಷ ದೊಡ್ಡ ಜವಾಬ್ದಾರಿಯನ್ನು ನೀಡಿದೆ. ಅದನ್ನು ಸರಿಯಾಗಿ ನಿಭಾಯಿಸುತ್ತೇನೆ.

ಸಾಮಾನ್ಯ ಕಾರ್ಯಕರ್ತನಾಗಿ 45 ವರ್ಷಗಳಿಂದ ಕೆಲಸ ಮಾಡಿದ್ದೇನೆ. ಕಾಂಗ್ರೆಸ್ ನ ದುರಾಡಳಿತವನ್ನು ಜನರ ಮುಂದಿಡಲು ಪ್ರಯತ್ನಿಸುತ್ತೇವೆ. ಮುಂದಿನ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ 28 ಸ್ಥಾನಗಳನ್ನು ಗೆಲ್ಲುಲು ಪ್ರಯತ್ನಿಸುತ್ತೇವೆ ಎಂದರು.

**ಪಕ್ಷದಲ್ಲಿ ಅಸಮಾಧಾನ ಸ್ಫೋಟ**

ಶಾಸಕಾಂಗ ಪಕ್ಷದ ಸಭೆಗೂ ಮುನ್ನ ಹೈಕಮಾಂಡ್ ವೀಕ್ಷಕರು ಪ್ರಮುಖರ ಜೊತೆ ಸಭೆ ನಡೆಸಿದ್ದರು. ವರಿಷ್ಠರ ನಿರ್ಧಾರ ಬಗ್ಗೆ ಆಕಾಂಕ್ಷಿಗಳ ಗಮನಕ್ಕೆ ತಂದಿದ್ದರು. ಇದೇ ವೇಳೆ ಆರ್ ಅಶೋಕ್ ನೇಮಕ ಕುರಿತು ತಿಳಿಸಿದಾಗ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ಹೈಕಮಾಂಡ್ ತೀರ್ಮಾನ ಒಪ್ಪದೆ ಸಭೆಯಿಂದ ತೆರಳಿದ್ದರು.

## ಜೆಡಿಎಸ್ ಪಕ್ಷದಿಂದ ಸಿಎಂ ಇಬ್ರಾಹಿಂ ಅಮಾನತು



ಬೆಂಗಳೂರು: ಪಕ್ಷ ವಿರೋಧಿ ಚಟುವಟಿಕೆಗಳ ಬಗ್ಗೆ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ತಕ್ಷಣದಿಂದಲೇ ಜಾರಿಗೆ ಬರುವಂತೆ ದೊಡ್ಡಗೌಡರು ಮಹತ್ತರವಾದ ಆದೇಶ ಹೊರಡಿಸಿದ್ದಾರೆ.

ಸಿಎಂ ಇಬ್ರಾಹಿಂ ಅವರನ್ನು ಜೆಡಿಎಸ್ ಪಕ್ಷದಿಂದಲೇ ಅಮಾನತುಗೊಳಿಸಿರುವುದಾಗಿ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ದೇವೇಗೌಡರು ಆದೇಶ ಹೊರಡಿಸಿದ್ದಾರೆ.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ವಿಚಾರದಲ್ಲಿ ರಾಜ್ಯಾಧ್ಯಕ್ಷರಾಗಿದ್ದ ಸಿಎಂ ಇಬ್ರಾಹಿಂ ವಿರೋಧ ವ್ಯಕ್ತಪಡಿಸಿದ್ದರು. ಅಲ್ಲದೇ ರಾಜ್ಯಾಧ್ಯಕ್ಷ ಸ್ಥಾನದಿಂದ ತೆಗೆದುಹಾಕಿದ್ದರೂ ತಾನೇ ರಾಜ್ಯಾಧ್ಯಕ್ಷ ಎಂದು ಹೇಳಿಕೊಂಡು ಪ್ರತ್ಯೇಕ ಸಭೆ ನಡೆಸಿ ಪಕ್ಷ ವಿರೋಧಿ ಚಟುವಟಿಕೆ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಅವರನ್ನು ಪಕ್ಷದಿಂದ ಅಮಾನತುಗೊಳಿಸಿರುವುದಾಗಿ ಆದೇಶ ಪ್ರತಿಯಲ್ಲಿ ತಿಳಿಸಿದ್ದಾರೆ.



## ಚಳಿಗಾಲ ಅಧಿವೇಶನದ ಪೂರ್ವ ಸಿದ್ಧತೆ ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4 ರಿಂದ ನಡೆಯಲಿರುವ ಚಳಿಗಾಲ ಅಧಿವೇಶನದ ಪೂರ್ವ ಸಿದ್ಧತೆಗಳನ್ನು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಪರಿಶೀಲನೆ ನಡೆಸಿದರು.

ನಂತರ ಸುವರ್ಣ ವಿಧಾನಸೌಧದಲ್ಲಿ ನಡೆಯಬೇಕಿರುವ ಸಿದ್ಧತೆಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು. ನಂತರ ಸುವರ್ಣ ಸೌಧದ ಆವರಣದಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ನೂತನ ಪುತ್ಥಳಿ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಶಾಸಕ ವಿಶ್ವಾಸ ವೈದ್ಯ, ಜಿಲ್ಲಾಧಿಕಾರಿ ನಿತೀಶ್ ಪಾಟೀಲ್, ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಮುಖಂಡರು ಇದ್ದರು.

## ಕರ್ನಾಟಕ ಪಬ್ಲಿಕ್ ಎಗ್ಸಾಮಿನೇಷನ್ ವಿಧೇಯಕ-2023 ಮುಂದಿನ ಅಧಿವೇಶನದಲ್ಲಿ ಮಂಡನೆ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಕರ್ನಾಟಕ ಪಬ್ಲಿಕ್ ಎಗ್ಸಾಮಿನೇಷನ್ (ಭ್ರಷ್ಟಾಚಾರ ಮತ್ತು ಅಕ್ರಮ ವಿಧಾನಗಳ ತಡೆಗಟ್ಟುವಿಕೆ ಕ್ರಮಗಳು) ವಿಧೇಯಕ–2023ಕ್ಕೆ ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದ್ದು, ಈ ವಿಧೇಯಕವನ್ನು ಮುಂದಿನ ವಿಧಾನ ಮಂಡಲ ಅಧಿವೇಶನದಲ್ಲಿ ಮಂಡಿಸಲು ನಿರ್ಧರಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಅವರು, ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಪಿಎಸ್ಐ, ಸಹಾಯಕ ಪ್ರಾಧ್ಯಾಪಕರ ಹುದ್ದೆ, ಎಫ್.ಡಿ.ಎ ಸೇರಿದಂತೆ ಸರ್ಕಾರದ ಹಲವು




ನೇಮಕಾತಿಗಳಲ್ಲಿ ವ್ಯಾಪಕವಾಗಿ ಅಕ್ರಮಗಳು ನಡೆದಿದ್ದವು. ಇದರಿಂದ ವರ್ಷಾನುಗಟ್ಟಲೆಯಿಂದ ಪರೀಕ್ಷೆಗೆ ತಯಾರಿ ನಡೆಸಿ, ಪ್ರಾಮಾಣಿಕವಾಗಿ ಪರೀಕ್ಷೆ ಎದುರಿಸಿದ್ದ ಸಾವಿರಾರು ಅಭ್ಯರ್ಥಿಗಳು ಉದ್ಯೋಗದಿಂದ ವಂಚಿತರಾಗಿದ್ದರು. ಇಂತಹ ಅಕ್ರಮ, ಅವ್ಯವಹಾರವನ್ನು ತಡೆಗಟ್ಟಿ, ಅರ್ಹರಿಗೆ ಸರ್ಕಾರಿ ಉದ್ಯೋಗಗಳು ದೊರಕುವಂತೆ ಮಾಡಲು ಕಟ್ಟುನಿಟ್ಟಿನ ಪರೀಕ್ಷಾ ವಿಧಾನ, ಪಾರದರ್ಶಕ ನೇಮಕಾತಿ ಪ್ರಕ್ರಿಯೆಯ ಅಳವಡಿಕೆ ಮಾಡಲು ನೂತನ ಮಸೂದೆಯನ್ನು ಜಾರಿಗೆ ತರಲು ಉದ್ದೇಶಿಸಿದ್ದೇವೆ ಎಂದು ತಿಳಿಸಿದ್ದಾರೆ.

ಇದರ ಮೊದಲ ಹಂತವಾಗಿ ವಿಧೇಯಕವನ್ನು ಸಚಿವ ಸಂಪುಟದ ಮುಂದಿಟ್ಟು ಅನುಮೋದನೆಯನ್ನು ಪಡೆದಿದ್ದೇವೆ. ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದಷ್ಟೇ ಅಲ್ಲ, ಅರ್ಹರಿಗೆ ಮಾತ್ರ ಉದ್ಯೋಗ ಸಿಗಬೇಕು ಎಂಬುದು ಸರ್ಕಾರದ ಆದ್ಯತೆಯಾಗಿದೆ ಎಂದಿದ್ದಾರೆ.

## ಬೋಟ್ ಅಗ್ನಿ ದುರಂತದಿಂದ ಅಂದಾಜು 13 ಕೋಟಿ ರೂ. ನಷ್ಟ



ಉಡುಪಿ: ಉಡುಪಿಯ ಗಂಗೊಳ್ಳಿಯ ಬಂದರಿನಲ್ಲಿ ಬೋಟ್ ಅಗ್ನಿ ದುರಂತ ನಡೆದ ಸ್ಥಳಕ್ಕೆ ಶುಕ್ರವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಭೇಟಿ ನೀಡಿದರು. ಸ್ಥಳ ಪರಿಶೀಲನೆ ಬಳಿಕ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳು ಹಾಗೂ ಸ್ಥಳೀಯ ಮೀನುಗಾರರೊಂದಿಗೆ ಸಚಿವರು ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು, ಅಗ್ನಿ ದುರಂತದಿಂದ ಸುಮಾರು 13 ರಿಂದ 15 ಕೋಟಿ ರೂ ನಷ್ಟ ಅಂದಾಜಿಸಲಾಗಿದೆ. ಇನ್ನು 15 ದಿನಗಳಲ್ಲಿ ಪರಿಹಾರ ಒದಗಿಸುವ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು. ಸ್ಥಳದಲ್ಲಿದ್ದ ಮೀನುಗಾರರು ಹಾಗೂ ಬೋಟ್ ಕಳೆದುಕೊಂಡ ಮಾಲೀಕರಿಗೆ ಸ್ವಾಂತನ ಹೇಳಿದರು. 9 ಬೋಟ್ ಗಳು, ಎರಡು ದೋಣಿಗಳು ಸಂಪೂರ್ಣ ಸುಟ್ಟಿರುವ ಬಗ್ಗೆ ಬೇಸರ ವ್ಯಕ್ತಪಡಿಸಿದ ಸಚಿವರು, ಈ ಕುರಿತು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಮೀನುಗಾರಿಕೆ ಮತ್ತು ಬಂದರು ಸಚಿವರೊಂದಿಗೆ ಚರ್ಚಿಸಿ ಪರಿಹಾರ ಒದಗಿಸಲಾಗುವುದು ಎಂದರು.



## ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದ ಆರ್‌ಟಿಓ ಅಧಿಕಾರಿ

ಬಳ್ಳಾರಿ: ಬಳ್ಳಾರಿ ಆರ್‌ಟಿಓ (RTO) ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ.

ಆರ್‌ಟಿಓ ಅಧೀಕ್ಷಕ ಚಂದ್ರಕಾಂತ್ ಗುಡಿಮನಿ ಮತ್ತು ಏಜೆಂಟ್ ಮೊಹಮ್ಮದ್ ರಾಜ್ ಲಂಚ ಪಡೆಯುತ್ತಿರುವ ವೇಳೆ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ.

ಗುರುವಾರ ರಾತ್ರಿ 10.20ರ ಸುಮಾರಿಗೆ ನಗರದ ಕಚೇರಿಯಲ್ಲಿ 15 ಸಾವಿರ ರೂ. ಲಂಚ ಪಡೆಯುತ್ತಿದ್ದ ಚಂದ್ರಕಾಂತ್ ಮತ್ತು ಮೊಹಮ್ಮದ್ ರಾಜ್ ರನ್ನು ರೆಡ್ ಹ್ಯಾಂಡ್‌ಆಗಿ ವಶಕ್ಕೆ ಪಡೆಯಲಾಗಿದೆ.

ಸದ್ಯ ಇಬ್ಬರನ್ನು ಬಳ್ಳಾರಿಯ ಲೋಕಾಯುಕ್ತ ಕಚೇರಿಯಲ್ಲಿ ವಿಚಾರಣೆ ನಡೆಸಿ, ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗವುದು ಎಂದು ಮೂಲಗಳಿಂದ ತಿಳಿದುಬಂದಿದೆ.

ಲೋಕಾಯುಕ್ತ ಎಸ್ಪಿ ಶಶಿಧರ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಗಿದೆ.

## ದಂಡ ಕಟ್ಟಿದ್ದೇನೆ, ಕರೆಂಟ್ ಕಳ್ಳ ಎನ್ನುವುದನ್ನು ನಿಲ್ಲಿಸಿ: ಮಾಜಿ ಸಿಎಂ ಎಚ್‌ಡಿಕೆ ಕಿಡಿ

ಬೆಂಗಳೂರು: "ದೀಪಾವಳಿ ಸಂದರ್ಭದಲ್ಲಿ ನಮ್ಮ ಮನೆಯಲ್ಲಿ ನಡೆದ ಅಚಾತುರ್ಯದ ಬಗ್ಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಈಗಾಗಲೇ ನನಗೆ ಕರೆಂಟ್ ಕಳ್ಳ ಎನ್ನುವ ಲೇಬಲ್ ಅನ್ನು ಸಿಎಂ, ಡಿಸಿಎಂ ಹಾಗೂ ಅವರ ಪಟಾಲಂ ಸೇರಿ ಇಟ್ಟಿದ್ದಾರೆ. ನನ್ನನ್ನು ಕರೆಂಟ್ ಕಳ್ಳ ಎನ್ನುವ ಇವರ ಆರೋಪಗಳಿಗೆಲ್ಲ ನಾನು ಹೆದರಲ್ಲ. ನಿಮ್ಮಷ್ಟು ಕಳ್ಳತನ ನಾನು ಮಾಡಿಲ್ಲ. ಬೆಸ್ಕಾಂ ನೀಡಿರುವ ಬಿಲ್ ಹಾಗೂ ದಂಡ ಕಟ್ಟಿದ್ದೇನೆ. ಇನ್ನು ಮುಂದೆ ಕರೆಂಟ್ ಕಳ್ಳ ಎನ್ನುವುದನ್ನು ನಿಲ್ಲಿಸಬೇಕು" ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಜೆ.ಪಿ.ಭವನದಲ್ಲಿರುವ ಜೆಡಿಎಸ್ ಕಚೇರಿಯಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, "ದೀಪಾವಳಿ ಸಮಯದಲ್ಲಿ ನಮ್ಮ ಮನೆಯಲ್ಲಿ ಅಚಾತುರ್ಯ ಆಗಿದೆ. ಅದಕ್ಕೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಲೈಟಿಂಗ್ ಹಾಕಿದ್ದಕ್ಕೆ ಹೆಚ್ಚು ವಿದ್ಯುತ್ ಖರ್ಚಾಗಲ್ಲ. ಲೈಟಿಂಗ್ ಹಾಕಿದ್ದಕ್ಕೆ 1 ಕಿಲೋ ವ್ಯಾಟ್ಗಿಂತಲೂ ಕಡಿಮೆ ವಿದ್ಯುತ್ ಉಪಯೋಗ ಆಗಲಿದೆ. ಆದರೆ ಇವರು 2.5 ಕಿಲೋ ವ್ಯಾಟ್ಗೆ ಲೆಕ್ಕ ತೆಗೆದುಕೊಂಡು, 7 ದಿನಗಳಿಗೆ 71 ಯುನಿಟ್ ಆಗಲಿದೆ ಎಂದು ಬಿಲ್



ಕೊಟ್ಟಿದ್ದಾರೆ. 71 ಯೂನಿಟ್ಗೆ ಮೂರು ಪಟ್ಟು, 68,526 ರೂಪಾಯಿ ದಂಡ ವಿಧಿಸಿದ್ದಾರೆ. ಆ ಬಿಲ್ನಲ್ಲಿ ಅವರ ಲೆಕ್ಕಾಚಾರದಲ್ಲಿ 2.5 ಕಿಲೋ ವ್ಯಾಟ್ ವಿದ್ಯುತ್ ಉಪಯೋಗ ಆಗಿದೆ ಅಂತ ಹಾಕಿದ್ದಾರೆ. ಈ ಬಿಲ್ ಅನ್ನು ಮರು ಪರಿಶೀಲನೆ ಮಾಡಬೇಕು.

ನಮ್ಮ ಮನೆಯಲ್ಲಿ 33 ಕಿಲೋ ವ್ಯಾಟ್ ಪರ್ಮಿಷನ್ ತೆಗೆದುಕೊಂಡಿದ್ದೇನೆ. ನಾನು ನಿತ್ಯ ಉಪಯೋಗ ಮಾಡುವ ಕರೆಂಟ್ ಇದು. ಈ ಬಗ್ಗೆ ಮರುಪರಿಶೀಲನೆ ಆಗಬೇಕು." ಎಂದು ಒತ್ತಾಯಿಸಿದರು.

ನಾನು ಮಹಜರು ಕಾಪಿ ಕೇಳಿದ್ದೆ. ನೀವು ಕೊಟ್ಟಿರುವ ಬಿಲ್ ಕೂಡ ಸರಿ ಇಲ್ಲ ಎಂದು ಪ್ರತಿಭಟನೆ ಕೂಡ ಮಾಡಿದ್ದೇನೆ. ಅವರು ಹಾಕಬೇಕಿದ್ದ ಬಿಲ್ 2,526 ರೂಪಾಯಿ ಆಗಬೇಕಿತ್ತು. ಆದರೆ ಅವರು 66 ಸಾವಿರ ರೂ ಬಿಲ್ ಕೊಟ್ಟಿದ್ದಾರೆ. ಮಾಜಿ ಸಿಎಂ ಆಗಿ ನನ್ನ ಪರಿಸ್ಥಿತಿಯೇ ಹೀಗೆ. ಇನ್ನು ಜನಸಾಮಾನ್ಯರ ಪರಿಸ್ಥಿತಿ ಹೇಗಿರಬಹುದು? ಪ್ರತಿ ವರ್ಷ ಮಾಡುವ ಕನಕಪುರ ಉತ್ಸವಕ್ಕೆ ಎಲ್ಲಿಂದ ಕರೆಂಟ್ ಬಳಕೆ ಆಗುತ್ತದೆ? ಕಾಂಗ್ರೆಸ್ನವರು ಪಾದಯಾತ್ರೆ ಮಾಡಿದಾಗ ಎಲ್ಲಿಂದ ಕರೆಂಟ್ ತೆಗೆದುಕೊಂಡಿದ್ದರು. ಕನಕಪುರ ಉತ್ಸವಕ್ಕೆ ಇಡಿ ಊರಿಗೇ ಜನರೇಟರ್ ಹಾಕ್ತಾರಾ" ಎಂದು ಪ್ರಶ್ನಿಸಿದ್ದಾರೆ.

## ಸತೀಶ್ ಶುಗರ್ಸ್–ಬೆಳಗಾವಿ ಶುಗರ್ಸ್: ಪ್ರತಿ ಟನ್ ಕಬ್ಬಿಗೆ 3 ಸಾವಿರ ದರ ಘೋಷಣೆ

ಬೆಳಗಾವಿ: ಸತೀಶ್ ಶುಗರ್ಸ್ ಕಾರ್ಖಾನೆ ಹಾಗೂ ಬೆಳಗಾವಿ ಶುಗರ್ಸ್ ಕಾರ್ಖಾನೆಗಳಿಗೆ ಪ್ರಸಕ್ತ 2023–24ನೇ ಸಾಲಿನ ಕಬ್ಬು ನುರಿಸುವ ಹಂಗಾಮಿನಲ್ಲಿ ಪೂರೈಸುವ ಪ್ರತಿ ಟನ್ ಕಬ್ಬಿಗೆ 3000 ಸಾವಿರ ರೂ ದರ ನೀಡಲಾಗುವುದು ಎಂದು ಸತೀಶ್ ಶುಗರ್ಸ್ ಹಾಗೂ ಬೆಳಗಾವಿ ಶುಗರ್ಸ್ ಕಾರ್ಖಾನೆ ಎಂಡಿ ಪ್ರದೀಪಕುಮಾರ ಇಂಡಿ ಘೋಷಿಸಿದ್ದಾರೆ.

ಪತ್ರಿಕಾ ಪ್ರಕಟಣೆಗೆ ಮಾಹಿತಿ ನೀಡಿದ ಅವರು, ಈ ಎರಡು ಕಾರ್ಖಾನೆಗಳಿಂದ ಪ್ರಸಕ್ತ ಹಂಗಾಮಿನಲ್ಲಿ ಪ್ರತಿ ಟನ್ ಕಬ್ಬಿಗೆ ಮೂರು ಸಾವಿರ ರೂ ದರ ಪಾವತಿಸಲು ಆಡಳಿತ ಮಂಡಳಿಗಳು ನಿರ್ಧರಿಸಿವೆ ಎಂದು ಪ್ರಕಟಿಸಿದರು.




ತಾಲೂಕಿನ ರೈತರ ಆರ್ಥಿಕ ಅಭ್ಯುದಯಕ್ಕೆ ಈ ಎರಡು ಕಾರ್ಖಾನೆಗಳು ಶ್ರಮಿಸುತ್ತಿವೆ. ಇಲ್ಲಿಯವರೆಗೆ ಆಡಳಿತ ಮಂಡಳಿ ಪ್ರತಿ ವರ್ಷ ಘೋಷಿಸಿದ ದರ ನೀಡುತ್ತ ಬಂದಿದ್ದು ರೈತರೂ ಸಹ ತಾವು ಬೆಳೆದ ಕಬ್ಬನ್ನು ಈ ಕಾರ್ಖಾನೆಗಳಿಗೆ ಪೂರೈಸಿದ್ದಾರೆ. ಪ್ರಸಕ್ತ ವರ್ಷ ಮಳೆ ಕೊರತೆಯಿಂದ ನಿರೀಕ್ಷಿಸಿದಷ್ಟು ಕಬ್ಬು ಬೆಳೆ ಬಂದಿಲ್ಲ. ಆದಾಗ್ಯೂ ಈ ವರ್ಷ ಸಹ ಎಂದಿನಂತೆ ನಿಗದಿತ ಪ್ರಮಾಣದಲ್ಲಿ ಕಬ್ಬು ನುರಿಸಿ ಸಕ್ಕರೆ ಉತ್ಪಾದಿಸುವ ಸಂಕಲ್ಪ ಆಡಳಿತ ಮಂಡಳಿಯವರದ್ದಾಗಿದೆ ಎಂದು ಅವರು ತಿಳಿಸಿದರು.

ಮುಖ್ಯವಾಗಿ 27–10–2023 ರಿಂದ 05–11–2023ರವರೆಗೆ ಪೂರೈಕೆಯಾದ ಕಬ್ಬಿನ ಬಿಲ್ಲನ್ನು ಕಬ್ಬು ಪೂರೈಕೆದಾರರ ಖಾತೆಗಳಿಗೆ ಈಗಾಗಲೇ ಜಮಾ ಮಾಡಲಾಗಿದೆ. ಆದ್ದರಿಂದ ಸಮಸ್ತ ರೈತ ಬಾಂಧವರು ನಮ್ಮ ಎರಡು ಕಾರ್ಖಾನೆಗಳಿಗೆ ತಾವು ಬೆಳೆದ ಗುಣಮಟ್ಟದ ಕಬ್ಬನ್ನು ಹೆಚ್ಚಿನ ಪ್ರಮಾಣದಲ್ಲಿ ಪೂರೈಸಿ ಪ್ರಸಕ್ತ ಹಂಗಾಮನ್ನು ಯಶಸ್ವಿಗೊಳಿಸಲು ಸತೀಶ್ ಶುಗರ್ಸ್ ಹಾಗೂ ಬೆಳಗಾವಿ ಶುಗರ್ಸ್ ಕಾರ್ಖಾನೆ ಎಂಡಿ ಪ್ರದೀಪಕುಮಾರ ಇಂಡಿ ವಿನಂತಿಸಿದ್ದಾರೆ.

## ನಾಗರಿಕರ ಸಾವನ್ನು ಭಾರತ ತೀವ್ರವಾಗಿ ಖಂಡಿಸುತ್ತದೆ: ಹಮಾಸ್–ಇಸ್ರೇಲ್ ಸಂಘರ್ಷದ ಬಗ್ಗೆ ಪ್ರಧಾನಿ ಮೋದಿ

ನವದೆಹಲಿ: ಹಮಾಸ್–ಇಸ್ರೇಲ್ ಸಂಘರ್ಷದಲ್ಲಿ ಸಂಭವಿಸುತ್ತಿರುವ ಅಮಾಯಕ ನಾಗರಿಕರ ಸಾವನ್ನು ತೀವ್ರವಾಗಿ ಖಂಡಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ಮಾತುಕತೆ ಮೂಲಕ ಈ ಸಂಘರ್ಷವನ್ನು ತಪ್ಪಿಸಬೇಕು ಎಂದು ಶುಕ್ರವಾರ ಹೇಳಿದ್ದಾರೆ.



ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಈ ಸಂಘರ್ಷದಿಂದ ಹೊಸ ಸವಾಲುಗಳು ಹೊರಹೊಮ್ಮುತ್ತಿವೆ ಮತ್ತು ಜಾಗತಿಕ ಒಳಿತಿಗಾಗಿ, ಜಾಗತಿಕ ದಕ್ಷಿಣದ ದೇಶಗಳು ಒಂದೇ ಧ್ವನಿಯಲ್ಲಿ ಮಾತನಾಡುವ ಸಮಯ ಬಂದಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಭಾರತ ಆಯೋಜಿಸಿದ್ದ ವರ್ಚುವಲ್ ವಾಯ್ಸ್ ಆಫ್ ಗ್ಲೋಬಲ್ ಸೌತ್ ಶೃಂಗಸಭೆಯ ಎರಡನೇ ಆವೃತ್ತಿಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಹಮಾಸ್–ಇಸ್ರೇಲ್ ಸಂಘರ್ಷದಿಂದ ಉದ್ಭವಿಸುವ ಪರಿಸ್ಥಿತಿಯನ್ನು ಎದುರಿಸಲು ಸಂಯಮದ ಜೊತೆಗೆ ಮಾತುಕತೆ ಮತ್ತು ರಾಜತಾಂತ್ರಿಕತೆಗೆ ದೆಹಲಿ ಒತ್ತು ನೀಡಿದೆ ಎಂದರು.

ಅಕ್ಟೋಬರ್ 7 ರಂದು ಇಸ್ರೇಲ್ ಅನಾಗರಿಕರ ಮೇಲೆ ಹಮಾಸ್ ನಡೆಸಿದ ಉಗ್ರ ದಾಳಿಯನ್ನು ಭಾರತ ಖಂಡಿಸಿದೆ. ಅದೇ ಸಮಯದಲ್ಲಿ ಇಸ್ರೇಲ್ ಮತ್ತು ಹಮಾಸ್ ನಡುವಿನ ಸಂಘರ್ಷದಲ್ಲಿ ನಾಗರಿಕರ ಸಾವನ್ನು ಭಾರತ ಬಲವಾಗಿ ಖಂಡಿಸುತ್ತದೆ ಎಂದು ಪ್ರಧಾನಿ ಹೇಳಿದ್ದಾರೆ.

"ಪಶ್ಚಿಮ ಏಷ್ಯಾದಲ್ಲಿನ ಈ ಬೆಳವಣಿಗೆಗಳಿಂದ ಹೊಸ ಸವಾಲುಗಳು ಹೊರಹೊಮ್ಮುತ್ತಿರುವುದನ್ನು ನಾವು ನೋಡುತ್ತಿದ್ದೇವೆ. ಫ್ಯಾಲೆಸ್ತೀನ್ ಅಧ್ಯಕ್ಷ ಮಹಮೂದ್ ಅಬ್ಬಾಸ್ ಅವರೊಂದಿಗೆ ಮಾತನಾಡಿದ ನಂತರ, ನಾವು ಫ್ಯಾಲೆಸ್ತೀನ್ ಜನರಿಗೆ ಮಾನವೀಯ ನೆರವನ್ನು ಕೂಡಾ ಕಳುಹಿಸಿದ್ದೇವೆ. ಜಾಗತಿಕ ದಕ್ಷಿಣದ ದೇಶಗಳು ಹೆಚ್ಚಿನ ಜಾಗತಿಕ ಒಳಿತಿಗಾಗಿ ಒಂದಾಗಬೇಕಾದ ಸಮಯ ಇದು" ಎಂದು ಪ್ರಧಾನಿ ಮೋದಿ ಕರೆ ನೀಡಿದ್ದಾರೆ. "ವಾಯ್ಸ್ ಆಫ್ ಗ್ಲೋಬಲ್ ಸೌತ್ 21ನೇ ಶತಮಾನದ ಬದಲಾಗುತ್ತಿರುವ ಜಗತ್ತನ್ನು ಪ್ರತಿಬಿಂಬಿಸುವ ಅತ್ಯಂತ ವಿಶಿಷ್ಟವಾದ ವೇದಿಕೆಯಾಗಿದೆ" ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

## ಛತ್ತೀಸ್ ಗಢದ ಗರಿಯಾಬಾದ್ ನಲ್ಲಿ ನಕ್ಸಲ್ ಸ್ಫೋಟ: ಐಟಿಬಿಪಿ ಯೋಧ ಹುತಾತ್ಮ



ಗರಿಯಾಬಂದ್: ಛತ್ತೀಸ್ ಗಢ ವಿಧಾನಸಭೆ ಚುನಾವಣೆಯ ಎರಡನೇ ಹಂತದ ಮತದಾನ ನಡೆದ ಗರಿಯಾಬಂದ್ ಜಿಲ್ಲೆಯಲ್ಲಿ ಶುಕ್ರವಾರ ನಕ್ಸಲೀಯರು ನಡೆಸಿದ ಸ್ಫೋಟದಲ್ಲಿ ಇಂಡೋ–ಟಿಬೆಟಿಯನ್ ಬಾರ್ಡರ್ ಪೊಲೀಸ್ ಯೋಧರೊಬ್ಬರು ಹುತಾತ್ಮರಾಗಿದ್ದಾರೆ.

ಭದ್ರತಾ ಸಿಬ್ಬಂದಿಯ ಬೆಂಗಾವಲಿನಲ್ಲಿ ಬಂದಿದ್ದ ಮತಗಟ್ಟೆ ತಂಡವು ಮತದಾನ ಮುಗಿಸಿ ಹಿಂತಿರುಗುತ್ತಿದ್ದಾಗ ಬಡೇ ಗೊಬ್ರಾ ಗ್ರಾಮದ ಬಳಿ ಈ ಘಟನೆ ನಡೆದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ನಕ್ಸಲೀಯರು ಸ್ಫೋಟವನ್ನು ಪ್ರಚೋದಿಸಿದ್ದು, ಹುತಾತ್ಮ ಐಟಿಬಿಪಿ ಸಿಬ್ಬಂದಿಯನ್ನು ಹೆಡ್ ಕಾನ್‌ಸ್ಟೆಬಲ್ ಜೋಗಿಂದರ್ ಸಿಂಗ್ ಎಂದು ಗುರುತಿಸಲಾಗಿದೆ. ಛತ್ತೀಸ್‌ಗಢದ ಎರಡನೇ ಹಂತದ ಚುನಾವಣೆಗೆ ಶುಕ್ರವಾರ ರಾಜ್ಯದ ಒಟ್ಟು 90 ವಿಧಾನಸಭಾ ಕ್ಷೇತ್ರಗಳ ಪೈಕಿ 70 ಕ್ಷೇತ್ರಗಳಲ್ಲಿ ಮತದಾನ ನಡೆದಿದೆ. ನವೆಂಬರ್ 7 ರಂದು ಮೊದಲ ಹಂತದ ಚುನಾವಣೆ ನಡೆದಿದ್ದು, ಡಿಸೆಂಬರ್ 3 ರಂದು ಚುನಾವಣಾ ಫಲಿತಾಂಶ ಪ್ರಕಟವಾಗಲಿದೆ.

## ಜೆ.ಸಿ.ರಸ್ತೆಯಲ್ಲಿ ನೂತನವಾಗಿ ನಿರ್ಮಿಸಲಾದ ಎಂ. ನಾಗಪ್ಪ ಸ್ಮಾರಕ ಭವನ ಉದ್ಘಾಟನೆ

### ಶತಮಾನೋತ್ಸವ ಆಚರಿಸುತ್ತಿರುವ ಕರ್ನಾಟಕ ರೆಡ್ಡಿ ಜನ ಸಂಘಕ್ಕೆ ಒಮ್ಮೆಯೂ ಚುನಾವಣೆ ನಡೆದಿಲ್ಲ, ಸರ್ವಸಮ್ಮತ ಆಯ್ಕೆ ಪ್ರಜಾಪ್ರಭುತ್ವಕ್ಕೆ ಮಾದರಿ: ಸಚಿವ ರಾಮಲಿಂಗಾ ರೆಡ್ಡಿ

ಬೆಂಗಳೂರು: ಕರ್ನಾಟಕ ರೆಡ್ಡಿಜನ ಸಂಘ ಇನ್ನೆರಡು ವರ್ಷಗಳಲ್ಲಿ ಶತಮಾನೋತ್ಸವ ಆಚರಿಸಿಕೊಳ್ಳಲಿದ್ದು, ಇದುವರೆವಿಗೂ ಸಂಘಕ್ಕೆ ಚುನಾವಣೆಯಿಲ್ಲದೇ ನಿರ್ದೇಶಕರನ್ನು ಸರ್ವಾನುಮತದಿಂದ ಆಯ್ಕೆ ಮಾಡುತ್ತಾ ಬಂದಿರುವುದು ಐತಿಹಾಸಿಕ ಸಾಧನೆ. ಇದು ರೆಡ್ಡಿ ಜನಾಂಗದಲ್ಲಿ ಒಗ್ಗಟ್ಟಿನ ಪ್ರತೀಕ ಮತ್ತು ಪ್ರಜಾಪ್ರಭುತ್ವಕ್ಕೆ ಮಾದರಿ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ಕರ್ನಾಟಕ ರೆಡ್ಡಿಜನ ಸಂಘದಿಂದ ಜೆ.ಸಿ.ರಸ್ತೆಯಲ್ಲಿ ನೂತನವಾಗಿ ನಿರ್ಮಿಸಲಾದ "ಎಂ. ನಾಗಪ್ಪ ಸ್ಮಾರಕ ಭವನದ"ವನ್ನು ಉದ್ಘಾಟಿಸಿ ಮಾತನಾಡಿ,



ಸಂಘದಲ್ಲಿ ಪ್ರಜಾಸತ್ತಾತ್ಮಕವಾಗಿ ಮತ್ತು ಸರ್ವಾನುಮತದಿಂದ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿರುವುದು ನಿಜಕ್ಕೂ ಮಾದರಿಯಾದ ನಡೆ. ಸಂಘದ ಸಂಸ್ಥಾಪಕರು, ಸಂಘಕ್ಕೆ ದಾನಿಗಳ ಕೊಡುಗೆ ಅಪಾರ. ರಾಜ್ಯದ ಪ್ರಮುಖ ಗುತ್ತಿಗೆದಾರರಾಗಿದ್ದ ನಾಗಪ್ಪ ಅವರ ಹೆಸರಿನಲ್ಲಿ ನೂತನ ಕಟ್ಟಡ ಉದ್ಘಾಟನೆಯಾಗಿರುವುದು ಹೆಮ್ಮೆಯ ಸಂಗತಿ. ಅವರ ಭಾವಚಿತ್ರವನ್ನು ಈ ಕಟ್ಟಡದಲ್ಲಿ ಸೂಕ್ತ ಸ್ಥಳದಲ್ಲಿ ಅನಾವರಣ ಮಾಡಬೇಕು ಎಂದು ಸಲಹೆ ಮಾಡಿದರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ್ ಮಾತನಾಡಿ, ಸಮುದಾಯದ ಹಿತಕ್ಕಾಗಿ ಪ್ರತಿಯೊಬ್ಬರು ಶ್ರಮಿಸುತ್ತಿರುವುದನ್ನು ಶ್ಲಾಘನೀಯ. ಹಿರಿಯರು ಹಾಕಿಕೊಟ್ಟ ಸಂಪ್ರದಾಯಗಳನ್ನು ಪಾಲಿಸುತ್ತಾ, ಸಂಘದ ಧ್ಯೇಯೋದ್ದೇಶಗಳನ್ನು ಎತ್ತಿ ಹಿಡಿಯಬೇಕು ಎಂದು ಸಲಹೆ ಮಾಡಿದರು.

ಮಾಜಿ ರಾಜ್ಯ ಸಭಾಸದಸ್ಯ ಕೆ.ಸಿ.ರಾಮಮೂರ್ತಿ ಮಾತನಾಡಿ, ಎಂ.ನಾಗಪ್ಪ ಅವರು ಸಂಘಕ್ಕೆ ನೀಡಿದ ಕೊಡುಗೆ, ವಿಶೇಷವಾಗಿ ಅವರು ರೆಡ್ಡಿ ಸಮುದಾಯದವರ ಏಳಿಗೆಗಾಗಿ ಹೊಂದಿದ್ದ ಅಪಾರವಾದ ಕಾಳಜಿಯನ್ನು ಸ್ಮರಿಸಿದರು. ಸಂಘದಿಂದ 'ಸಂಸ್ಥಾಪಕರ ದಿನಾಚರಣೆ' ಮಾಡಿದ್ದು, ಅದೇ ರೀತಿಯಲ್ಲಿ "ದಾನಿಗಳ ದಿನಾಚರಣೆಯನ್ನೂ" ಆಚರಿಸಿ ಅವರ ಕುಟುಂಬದವರನ್ನು ಸನ್ಮಾನಿಸುವ ಮೂಲಕ ಕೃತಜ್ಞತೆ ಸಲ್ಲಿಸಬೇಕಾಗಿದೆ ಎಂದು ಸಲಹೆ ನೀಡಿದರು.

ಶ್ರೀ ವೇಮನಾನಂದ ಸ್ವಾಮಿಜಿ ಸಾನಿದ್ಯ ವಹಿಸಿದ್ದರು. ಯಲಹಂಕ ವಿಧಾನಸಭ ಕ್ಷೇತ್ರದ ಶಾಸಕ ಎಸ್.ಆರ್‌ವಿಶ್ವನಾಥ್, ವಿಧಾನ ಪರಿಷತ್ ಸದಸ್ಯ ಗೋಪಿನಾಥ್, ಮಾಜಿ ಶಾಸಕ, ಸಂಘದ ಮಾಜಿ ಅಧ್ಯಕ್ಷ ಬಿ.ವಿ.ರಾಮಚಂದ್ರರೆಡ್ಡಿ, ದಿ: ಎಂ. ನಾಗಪ್ಪನವರ ಪುತ್ರ ದಯಾನಂದರೆಡ್ಡಿ, ಕಾರ್ಯದರ್ಶಿ ಕೆ.ಎನ್. ಕೃಷ್ಣಾರೆಡ್ಡಿ, ಉಪಾಧ್ಯಕ್ಷ ವೆಂಕಟಶಿವಾರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.

# 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ

## ಭಾರತದ ಸಹಕಾರಿ ಸಂಸ್ಥೆಗಳು ಸಾಮಾಜಿಕ ಮತ್ತು ಆರ್ಥಿಕ ರಚನೆಯ ಅವಿಭಾಜ್ಯ ಅಂಗವಾಗಿವೆ: ಸಚಿವ ಸಂತೋಷ ಎಸ್. ಲಾಡ್

ಧಾರವಾಡ (ಕರ್ನಾಟಕ ವಾರ್ತೆ) ನ.17: ಸಹಕಾರಿ ಸಂಸ್ಥೆಗಳು ದಶಕಗಳಿಂದ ಭಾರತದ ಸಾಮಾಜಿಕ ಮತ್ತು ಆರ್ಥಿಕ ರಚನೆಯ ಅವಿಭಾಜ್ಯ ಅಂಗವಾಗಿವೆ. ಭಾರತದ ಸಹಕಾರಿ ವ್ಯವಸ್ಥೆಯು ಇಡೀ ವಿಶ್ವದಲ್ಲಿಯೇ ದೊಡ್ಡದಾಗಿದೆ ಮತ್ತು ಕೃಷಿ ಸಂಭಂದಿತ ವಲಯದ ಪ್ರಬಲ ಆಧಾರಸ್ತಂಭವಾಗಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಅವರು ಇಂದು (ನ.17) ಬೆಳಿಗ್ಗೆ ಕಲಘಟಗಿ ಪಟ್ಟಣದ ಹನ್ನೆರಡೆತ್ತಿನ ಮಠದ ಹತ್ತಿರದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ಸೌಹಾರ್ದ ಸಂಯುಕ್ತ ಸಹಕಾರಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಮತ್ತು ಕರ್ನಾಟಕ ರಾಜ್ಯ ತೋಟಗಾರಿಕಾ ಮಹಾಮಂಡಳ ಹಾಗೂ ಕರ್ನಾಟಕ ಸೆಂಟ್ರಲ್ ಕೋ ಅಪರೇಟಿವ್ ಬ್ಯಾಂಕ್, ಧಾರವಾಡ ಮತ್ತು ವಿವಿಧ ಸಹಕಾರ ಸಂಘ, ಹಾಲು ಒಕ್ಕೂಟಗಳ ಆಶ್ರಯದಲ್ಲಿ ಆಯೋಜಿಸಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಸಹಕಾರ ಸಂಘಕ್ಕೆ ಅವಿಭಜಿತ ಧಾರವಾಡ ಜಿಲ್ಲೆಯ ಸಹಕಾರಿ ರಂಗದ ಪಿತಾಮಹ ಸಿದ್ಧನಗೌಡ ರಾಮನಗೌಡರ ಕೊಡುಗೆ ಅಪಾರವಾಗಿದೆ. ದೇಶದಲ್ಲಿ 9 ಲಕ್ಷ ಸಹಕಾರ ಸಂಸ್ಥೆಗಳಿವೆ. ಸಹಕಾರ ಸಂಸ್ಥೆಗಳು ಬಡತನವನ್ನು ನಿವಾರಿಸಲು, ಉದ್ಯೋಗವನ್ನು ಸೃಷ್ಟಿಸಲು ಮತ್ತು ಸಮಾನ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವಲ್ಲಿ ಪ್ರಮುಖ ಪಾತ್ರ ವಹಿಸಿವೆ.



ಸಹಕಾರಿ ಸಂಘಗಳಿಂದ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಿ, ಉದ್ಯೋಗವನ್ನು ಹೆಚ್ಚಿಸಲು ಸಹಕಾರಿಯಾಗಿದೆ. ಸರ್ಕಾರ ಜಾರಿ ಮಾಡುತ್ತಿರುವ ಐದು (ಗ್ಯಾರಂಟಿ) ಜನಪರ ಯೋಜನೆಗಳಿಗೆ ಅಂದಾಜು 56 ಸಾವಿರ ಕೋಟಿ ಅನುದಾನ ಬಳಕೆ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಗಮದ ಉಪಾಧ್ಯಕ್ಷ ಜಗದೀಶ ಕವಟಗಿಮಠ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಉಪಾಧ್ಯಕ್ಷ ಕೆ.ಕೆ. ಮಹೇಂದ್ರ ಪ್ರಸಾದಗೌಡ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡದ ವೃತ್ತಿಪರ ನಿರ್ದೇಶಕ ಬಾಪುಗೌಡ ಡಿ. ಪಾಟೀಲ, ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಲಿಂಗರಾಜ್ ಚಪ್ಪರದಳ್ಳಿ, ಕರ್ನಾಟಕ ರಾಜ್ಯ ಗ್ರಾಹಕ ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಪಿ. ಪಾಟೀಲ್, ಕರ್ನಾಟಕ ರಾಜ್ಯ ಸಹಕಾರ ತೋಟಗಾರಿಕಾ ಮಹಾಮಂಡಳದ ಅಧ್ಯಕ್ಷ ಡಾ.ಬಿ.ಡಿ. ಭೂಕಾಂತ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಉಪಾಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ್, ಧಾರವಾಡ ಜಿಲ್ಲಾ ಸೌಹಾರ್ದ ಸಹಕಾರ ಒಕ್ಕೂಟದ ಅಧ್ಯಕ್ಷ ಮಲ್ಲಿಕಾರ್ಜುನ ಹೊರಕೇರಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿಗಮದ ನಿರ್ದೇಶಕ ಡಾ. ಸಂಜಯ ಪಂ. ಹೊಸಮಠ, ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ ಶಂಕರ ವ್ಹಿ. ಮುಗದ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಸಹಕಾರ ಇಲಾಖೆಯ ಅಧಿಕಾರಿಗಳು ವೇದಿಕೆಯಲ್ಲಿದ್ದರು.

ಧಾರವಾಡ ಕೆ.ಸಿ.ಸಿ. ಬ್ಯಾಂಕ್ ನಿರ್ದೇಶಕ ಮಂಜುನಾಥಗೌಡ ಮುರಳ್ಳಿ ಸ್ವಾಗತಿಸಿದರು. ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಅಧ್ಯಕ್ಷ ಜಿ. ನಂಜನಗೌಡ ಪ್ರಾಸ್ತವಿಕವಾಗಿ ಮಾತನಾಡಿದರು. ಗೌರಿ ಮಟ್ಟಿ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಶ್ರೇಷ್ಠ ಸಹಕಾರಿಗಳಿಗೆ ಸನ್ಮಾನಿಸಿ, ಗೌರವಿಸಲಾಯಿತು. ಸಹಕಾರ ವಿಶೇಷ ವಾರಪತ್ರಿಕೆಯನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ವಿವಿಧ ಸಹಕಾರಿ ಕ್ಷೇತ್ರಗಳ ಪ್ರತಿನಿಧಿಗಳು, ನಿರ್ದೇಶಕರು, ಸದಸ್ಯರು ಭಾಗವಹಿಸಿದ್ದರು.

## ಮಿಶ್ರ ತಳಿ ಹಸು ಘಟಕ ಅನುಷ್ಠಾನ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿಯ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ 2023–24ನೇ ಸಾಲಿಗೆ ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಒಂದು ಮಿಶ್ರತಳಿ ಹಸು ಘಟಕ ಅನುಷ್ಠಾನಕ್ಕೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಒಂದು ಮಿಶ್ರ ತಳಿ ಹಾಲು ಕರೆಯುವ ಹಸು ಘಟಕ ವಿತರಿಸಲಾಗುವುದು. ಘಟಕದ ಮೊತ್ತ ರೂ. 65000/– ಆಗಿದ್ದು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ.90% ಅಂದರೆ ರೂ. 58500/– ಸಹಾಯಧನ ಒದಗಿಸಲಾಗುವುದು. ಸಹಾಯಧನವನ್ನು ಹೊರತು ಪಡಿಸಿದಂತೆ ಉಳಿದ ಮೊತ್ತ (ಶೇ.10%) ರೂ.6500/–ಗಳು ಫಲಾನುಭವಿಗಳ ವಂತಿಗೆ ಅಥವಾ ಸಾಲದ ರೂಪದಲ್ಲಿ ಬ್ಯಾಂಕಿನಿಂದ ಪಡೆಯುವುದು. ಸದರಿ ಕಾರ್ಯಕ್ರಮದಲ್ಲಿ ಸರ್ಕಾರದ ನಿಯಮಗಳಂತೆ ಮಹಿಳೆಯರಿಗೆ (ಶೇ.33.3), ವಿಶೇಷ ಚೇತನರಿಗೆ(ಶೇ.3)ರಷ್ಟು ಆದ್ಯತೆ ನೀಡಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕೂಲಿ ಕಾರ್ಮಿಕರು ಮತ್ತು ಪಶುಸಂಗೋಪನೆಯಲ್ಲಿ ತೊಡಗಿಸಿಕೊಂಡು ಕಡ್ಡಾಯವಾಗಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಸದಸ್ಯತ್ವ ಹೊಂದಿರುವ ಆಸಕ್ತರನ್ನು ಆಯ್ಕೆ ಮಾಡಲಾಗುವುದು. ಅರ್ಹ ಫಲಾನುಭವಿಗಳು ಭರ್ತಿಮಾಡಿದ ಅರ್ಜಿಗಳನ್ನು ಆಯಾ ತಾಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳಿಗೆ (ಆಡಳಿತ) ನವೆಂಬರ್ 27, 2023 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಆಯಾ ತಾಲೂಕಿನ ಮುಖ್ಯಸ್ಥರಾದ ಮುಖ್ಯ ಪಶುವೈದ್ಯಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರಾದ ಡಾ ರಾಜೀವ ಎನ್. ಕೂಲೇರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ಇಡಿ ಕೋರ್ಸ: ದಾಖಲಾತಿ ಪರಿಶೀಲನೆ

ಬೆಳಗಾವಿ: 2023–24 ನೇ ಸಾಲಿನ ಶೈಕ್ಷಣಿಕ ವರ್ಷದ 2 ವರ್ಷದ ಬಿ.ಇಡಿ ಕೋರ್ಸಿನ ದಾಖಲಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಮೂಲ ಪ್ರಮಾಣ ಪತ್ರಗಳ ಪರಿಶೀಲನೆಯು ಡಿಸೆಂಬರ್ 07, 2023 ರಿಂದ ಬೆಳಗಾವಿಯ ಸರಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, (ಸಿ.ಟಿ.ಇ) ಹಾಸ್ಟೆಲ್ ಕ್ಯಾಂಪಸ್ ಕಾಕತಿ ವೇಸ್ ರೋಡ್ ಇಲ್ಲಿ ನಡೆಸಲಾಗುತ್ತಿದೆ,

ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಮೂಲ ಪ್ರಮಾಣ ಪತ್ರಗಳೊಂದಿಗೆ ಹಾಜರಿರಲು ಸರಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಐ.ಎ.ಎಸ್ ಮತ್ತು ಕೆ.ಎ.ಎಸ್ ಪರೀಕ್ಷೆಗಳಿಗೆ ತರಬೇತಿ

ಶಿವಮೊಗ್ಗ: ಕರ್ನಾಟಕರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೇಂದ್ರ ಲೋಕಸೇವಾ ಆಯೋಗದವರು ನಡೆಸಲಿರುವ ಐಎಎಸ್ ಹಾಗೂ ಕರ್ನಾಟಕ ಲೋಕಸೇವಾ ಆಯೋಗದವರು ನಡೆಸಲಿರುವ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತರು ದಿನಾಂಕ: 24.11.2023 ರೊಳಗಾಗಿ ಬೆಳಗ್ಗೆ 10.00 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು 0821–2515944 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದೆಂದು ಕರಾಮುವಿ ಕುಲಸಚಿವಢ ಪ್ರೊ. ಕೆ.ಎಲ್.ಎನ್ ಮೂರ್ತಿಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊರ ರಾಜ್ಯಗಳಿಗೆ ಮೇವು ಸಾಗಾಣಿಕೆ, ಮಾರಾಟ ನಿಷೇಧ

ಬೆಳಗಾವಿ: ಜಿಲ್ಲೆಯಲ್ಲಿ ಮುಂಬರುವ ದಿನಗಳಲ್ಲಿ ಜಾನುವಾರುಗಳ ಮೇವಿಗೆ ಹಾಗೂ ಕುಡಿಯುವ ನೀರಿಗೆ ಕೊರತೆ ಆಗದಂತೆ ಅಗತ್ಯ ಕ್ರಮಕೈಗೊಳ್ಳಲು ಹಾಗೂ ಮೇವಿನ ಕೊರತೆಯಾಗುವ ಸಂಭವ ಇರುವ ಹಿನ್ನಲೆಯಲ್ಲಿ ಹೊರ ರಾಜ್ಯಗಳಿಗೆ ಮೇವು ಮಾರಾಟ ಮತ್ತು ಸಾಗಾಣಿಕೆಯನ್ನು ನವೆಂಬರ್ 16, 2023 ರಿಂದ ಜಾರಿಗೆ ಬರುವಂತೆ ನಿಷೇಧಿಸಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಆದೇಶ ಹೊರಡಿಸಿದ್ದಾರೆ. ಬೆಳಗಾವಿ ಜಿಲ್ಲೆಯಿಂದ ಹೊರ ರಾಜ್ಯಗಳಿಗೆ ಮೇವು ಸಾಗಾಣಿಕೆ ಹಾಗೂ ಮಾರಾಟವನ್ನು ಸಿ.ಆರ್ಪಿ.ಸಿ ಕಲಂ 144ರಡಿ ನಿಷೇಧಿಸಲಾಗಿದಿಸಲಾಗಿದೆ.

ಈ ಆದೇಶವನ್ನು ಉಲ್ಲಂಘಿಸಿ ಅಕ್ರಮವಾಗಿ ಜಿಲ್ಲೆಯಿಂದ ಹೊರ ರಾಜ್ಯಗಳಿಗೆ ಮೇವು ಸಾಗಾಣಿಕೆ ಹಾಗೂ ಮಾರಾಟವನ್ನು ಮಾಡುವುದು ಕಂಡು ಬಂದಲ್ಲಿ ತಕ್ಷಣ ಅಂತಹ ಮೇವನ್ನು ವಶಪಡಿಸಿಕೊಂಡು ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಇಂದು ಗ್ರಾಹಕರ ಕುಂದು ಕೊರತೆ ಸಭೆ

ಧಾರವಾಡ: ಧಾರವಾಡದ ಹೆಸ್ಕಾಂ ಶಹರ ಉಪ ವಿಭಾಗ–2 ರ ಕಚೇರಿಯಲ್ಲಿ ಗ್ರಾಹಕರ ಕುಂದುಕೊರತೆಗಳ ಸಭೆಯನ್ನು ನವೆಂಬರ್ 18 ರಂದು ಶನಿವಾರ ಮದ್ಯಾಹ್ನ 3 ಗಂಟೆಗೆ ಕರೆಯಲಾಗಿದೆ.

ಧಾರವಾಡ ನಗರದ ವಿಜಯಾ ರಸ್ತೆಯಲ್ಲಿರುವ ಹೆಸ್ಕಾಂ ಕಚೇರಿಯಲ್ಲಿ ಜರುಗುವ ಈ ಸಭೆಯ ಅಧ್ಯಕ್ಷತೆಯನ್ನು ಧಾರವಾಡ ಹೆಸ್ಕಾಂ, ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನೀಯರ್ ಅವರು ವಹಿಸಿಕೊಂಡು ಸಭೆಯನ್ನು ನಡೆಸಲಿದ್ದಾರೆ.

ಆದ್ದರಿಂದ ಶಹರ ಉಪ ವಿಭಾಗ–2, ವ್ಯಾಪ್ತಿಯಲ್ಲಿ ಬರುವ ವಿದ್ಯುತ್ಗ್ರಾಹಕರು ಸಭೆಗೆ ಹಾಜರಾಗಿ ಸದುಪಯೋಗ ಪಡೆದುಕೊಂಡು ತಮ್ಮ ವಿದ್ಯುತ್ ಬಗ್ಗೆ ಇದ್ದ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಯಕತ್ವ ಗುಣ–ಸದೃಢ ಸಮಾಜ ನಿರ್ಮಿಸಲು ಯುವ ಸಂಸತ್ ಸಹಕಾರಿ

ಶಿವಮೊಗ್ಗ: ಮಕ್ಕಳಲ್ಲಿ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆ, ನಾಯಕತ್ವ ಗುಣ, ಸಾಮಾಜಿಕ ಸಮಸ್ಯೆಗಳ ಅರಿವು ಮೂಡಿಸಿ, ಸದೃಢ ಸಮಾಜ ನಿರ್ಮಿಸಲು ಸಹಕರಿಸುವ ಉದ್ದೇಶದಿಂದ ಯುವ ಸಂಸತ್ ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಶಿಕ್ಷಣ ಇಲಾಖೆಯ ವಿಷಯ ಪರಿವೀಕ್ಷಕ ಶಿವನಗೌಡ ತಿಳಿಸಿದರು.

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಕರ್ನಾಟಕ ಸರ್ಕಾರದ ಸಚಿವಾಲಯ ಬೆಂಗಳೂರು ಹಾಗೂ ಜಿಲ್ಲಾ ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪ್ರೌಢಶಾಲಾ ವಿಭಾಗದ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಸರ್ಕಾರ ಸುಮಾರು ವರ್ಷಗಳಿಂದ ಯುವ ಸಂಸತ್ ಸ್ಪರ್ಧೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ನಮ್ಮ ಆಡಳಿತ ವ್ಯವಸ್ಥೆ ಕುರಿತು ಸಾಕ್ಷರತೆ ಒದಗಿಸುತ್ತಾ ಬಂದಿದೆ ಹಾಗೂ ವಿದ್ಯಾರ್ಥಿಗಳಲ್ಲಿ ವ್ಯವಸ್ಥೆಯನ್ನು ಪ್ರಶ್ನಿಸುವ, ಪರಿಹಾರ ಕಂಡುಕೊಳ್ಳುವ ಗುಣ, ನಾಯಕತ್ವ ಕಲೆಯನ್ನು ಕಲಿಸುತ್ತಿದೆ.

ತಾಲ್ಲೂಕು ಮಟ್ಟದಲ್ಲಿ ಯುವ ಸಂಸತ್ ಸ್ಪರ್ಧೆಗಳು ನಡೆದಿದ್ದು, ಪ್ರತಿ ತಾಲ್ಲೂಕುಗಳಿಂದ 5 ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟಕ್ಕೆ ಆಯ್ಕೆ ಮಾಡಲಾಗಿದೆ. ಇಂದಿನ ಯುವ ಸಂಸತ್ ಸ್ಪರ್ಧೆಯಲ್ಲಿ 35 ವಿದ್ಯಾರ್ಥಿಗಳು ಪಾಲ್ಗೊಂಡಿದ್ದು, ಇಲ್ಲಿಂದ 2 ವಿದ್ಯಾರ್ಥಿಗಳು ರಾಜ್ಯ ಮಟ್ಟಕ್ಕೆ ಆಯ್ಕೆಯಾಗುವರು. ಎಲ್ಲ ವಿದ್ಯಾರ್ಥಿಗಳು ಯುವ ಸಂಸತ್ ಸ್ಪರ್ಧೆಯಂತಹ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ರಾಜಕೀಯ ಪ್ರಜ್ಞೆಯನ್ನು ಹೊಂದಬೇಕೆಂದು ಆಶಿಸಿದರು.

ತಾಲ್ಲೂಕು ಸಮನ್ವಯಾಧಿಕಾರಿ ಶಿವಪ್ಪ ಸಂಗಣ್ಣನವರ್ ಮಾತನಾಡಿ, ಯುವ ಸಂಸತ್ ಗ್ರಾಮ ಸಭೆಯ ಮುಂದುವರೆದ ಭಾಗವಾಗಿದೆ. ಮಕ್ಕಳು ಸಮರ್ಥವಾಗಿ ರಾಜಕೀಯದಲ್ಲಿ ಭಾಗವಹಿಸಲು, ತಮ್ಮ ಪ್ರತಿಭೆಯನ್ನು ಕಂಡುಕೊಳ್ಳಲು ಇದೊಂದು ಉತ್ತಮ ವೇದಿಕೆ.ಯಾಗಿದೆ ಎಂರರು.

ಉಪನ್ಯಾಸಕರಾದ ಘನಶ್ಯಾಮ ಮಾತನಾಡಿ, ವಿಶ್ವದ ಅತ್ಯಂತ ದೊಡ್ಡ ಸಂವಿಧಾನ ನಮ್ಮದು. ಇಲ್ಲಿ ಪ್ರಜೆಗಳ ಪಾತ್ರವೇ ಮುಖ್ಯವಾಗಿದ್ದು ಸರ್ಕಾರ ರಚನೆ, ಟೀಕಿಸುವುದು ಮತ್ತು ತೆಗೆದುಹಾಕುವ ಅವಕಾಶವನ್ನು ಹೊಂದಿದ್ದೇವೆ. ಇಲ್ಲಿ ನಡೆಯುವ ಅಣಕು/ಯುವ ಸಂಸತ್ತು ನಮ್ಮ ಸಂಸತ್ತಿಗೆ ಮಾದರಿಯಾಗಿರಬೇಕು. ಉತ್ತಮ ಯುವ ಸಂಸದೀಯ ಪಟುಗಳಿಗೆ ಲೋಕಸಭೆಯಲ್ಲಿ ನಿರರ್ಗಳವಾಗಿ ವಿಷಯ ಮಂಡನೆಗೆ ಅವಕಾಶ ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಗಂಗಾನಾಯ್ಕ, ಸತೀಶ್ದತ್ತ ಭಂಡಾರಿ, ಶಿವಲಿಂಗಪ್ರಸಾದ್ ಇತರರು ಹಾಜರಿದ್ದರು.

## ಉಡುಪಿ ಜಿಲ್ಲೆಯ ಜನವಸತಿ ಪ್ರದೇಶಗಳಲ್ಲಿ ಭದ್ರತೆ ಹೆಚ್ಚಳ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭರವಸೆ

ಉಡುಪಿ: ಉಡುಪಿ ಜಿಲ್ಲೆಯ ಜನವಸತಿ ಪ್ರದೇಶಗಳಲ್ಲಿ ಭದ್ರತೆ ಹೆಚ್ಚಳ ಮಾಡಲಾಗುತ್ತದೆ ಎಂದು ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಒಂದೇ ಕುಟುಂಬದ ನಾಲ್ವರು ಹತ್ಯೆಗೀಡಾದ ಮನೆಗೆ ಭೇಟಿ ನೀಡಿದ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಇಲ್ಲಿನ ನೇಜಾರಿನ ತೃಪ್ತಿ ಲೇಔಟ್‌ನಲ್ಲಿ ಹತ್ಯೆಗೀಡಾದ ಮೊಹಮ್ಮದ್ ನೂರ್ ಅವರ ಮನೆಗೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಸಂತ್ರಸ್ಥ ಕುಟುಂಬದೊಂದಿಗೆ ಸರ್ಕಾರ ಇರಲಿದೆ. ಆರೋಪಿಗಳನ್ನು ತಕ್ಷಣವೇ ಬಂಧಿಸುವ ಮೂಲಕ ಉಡುಪಿ ಪೊಲೀಸರು ಶ್ಲಾಘನೀಯ ಕೆಲಸ ಮಾಡಿದ್ದಾರೆ. ನಾನು ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದ್ದೇನೆ




ಮತ್ತು ಅವರಲ್ಲಿ ಆತ್ಮವಿಶ್ವಾಸವನ್ನು ತುಂಬಿದ್ದೇನೆ. ಕುಟುಂಬಕ್ಕೆ ಶೀಘ್ರ ನ್ಯಾಯ ದೊರಕಿಸಲು ಸರ್ಕಾರದ ವತಿಯಿಂದ ಸಾಧ್ಯವಿರುವ ಎಲ್ಲವನ್ನೂ ಮಾಡುತ್ತೇವೆ ಎಂದು ಹೇಳಿದರು.

ಉಡುಪಿಯ ಜನರು ಶಾಂತಿಯನ್ನು ಪ್ರೀತಿಸುತ್ತಿದ್ದು, ಈ ಘಟನೆ ಅವರ ಮನಸ್ಸಿನಲ್ಲಿ ಭಯ ಮೂಡಿಸಿದೆ. ಇಂತಹ ಘಟನೆಗಳು ನಡೆಯಬಾರದಿತ್ತು. ವಿಶೇಷವಾಗಿ ವಸತಿ ಪ್ರದೇಶಗಳಲ್ಲಿ ಇಂತಹ ಘಟನೆಗಳನ್ನು ತಡೆಗಟ್ಟಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು. ಉಡುಪಿ ಜಿಲ್ಲೆಯಲ್ಲಿ ಸಿಸಿಟಿವಿ ಹಾಗೂ ಇತರೆ ಕಣ್ಗಾವಲು ವ್ಯವಸ್ಥೆಗೆ ಅಗತ್ಯ ವ್ಯವಸ್ಥೆ ಕಲ್ಪಿಸಲು ಡಿಸಿ ಮತ್ತು ಎಸ್ಪಿ ಜತೆ ಮಾತನಾಡುತ್ತೇನೆ ಎಂದು ಹೇಳಿದರು.

ಬೆಳಗಾವಿಯ ಕುಡಚಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಂಗಳವಾರ ನಡೆದ ಕೊಲೆ ಪ್ರಕರಣದ ಆರೋಪಿ ಪ್ರವೀಣ್ ಅರುಣ್ ಚೌಗುಲೆಯನ್ನು ಬಂಧಿಸಿದ ನಂತರ, ಈತನ ಬಗ್ಗೆ ಯಾರಿಗೂ ಸುಳಿವು ಸಿಕ್ಕಿಲ್ಲ ಎಂದು ಸಚಿವೆ ಹೆಬ್ಬಾಳ್ಕರ್ ಹೇಳಿದರು. ಆರೋಪಿಯು ಮದುವೆಯಾಗಿ ಇಬ್ಬರು ಮಕ್ಕಳನ್ನು ಹೊಂದಿದ್ದು, ಸೈಕೋನಂತೆ ಕಾಣುತ್ತಾನೆ. 20 ನಿಮಿಷದಲ್ಲಿ ನಾಲ್ಕು ಕೊಲೆ ಮಾಡಿರುವ ಆರೋಪಿಗಳ ಮಾನಸಿಕ ಸ್ಥಿತಿ ನಮ್ಮ ಊಹೆಗೂ ನಿಲುಕದ್ದು. ಕೊಲೆ ಪ್ರಕರಣದ ತ್ವರಿತ ವಿಚಾರಣೆ ನಡೆಸಬೇಕು. ಕಾನೂನಿನ ಚೌಕಟ್ಟಿನಲ್ಲಿ ಪ್ರಕರಣವನ್ನು ತ್ವರಿತಗೊಳಿಸಲು ಸರ್ಕಾರವು ಕುಟುಂಬಕ್ಕೆ ಎಲ್ಲ ರೀತಿಯ ಬೆಂಬಲವನ್ನು ನೀಡುತ್ತದೆ ಎಂದು ಹೇಳಿದರು.

## ಭೀಕರ ರಸ್ತೆ ಅಪಘಾತ : ಬೆಳಗಾವಿ ಮೂಲದ ಇಬ್ಬರ ಸಾವು



ಬೆಳಗಾವಿ: ಗದಗ ಜಿಲ್ಲೆಯ ಕಳಸಾಪೂರ ಕ್ರಾಸ್ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಚಾಲಕನ ನಿಯಂತ್ರಣ ತಪ್ಪಿ ಹೆದ್ದಾರಿ ಪಕ್ಕದಲ್ಲಿ ಇರುವ ಶೌಚಾಲಯದ ಗೋಡೆಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸ್ಥಳದಲ್ಲೇ ಮೃತಪಟ್ಟು, ಮತ್ತೊಬ್ಬ ಗಂಭೀರವಾಗಿ ಗಾಯಗೊಂಡ ಘಟನೆ ನಡೆದಿದೆ.

ಮೃತರು ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಸಿದ್ದಯ್ಯ ಪಾಟೀಲ್ ಹಾಗೂ ಬಾಬು ತಾರಿಹಾಳ ಎಂದು ತಿಳಿದುಬಂದಿದೆ.

ಇನ್ನೂ ಶಶಿ ಪಾಟೀಲ್ ಎಂಬುವರು ಗಂಭೀರವಾಗಿ ಗಾಯಗೊಂಡಿದ್ದು, ಜಿಮ್ಸ್ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಅಪಘಾತದ ರಭಸಕ್ಕೆ ಕಾರ್‌ನಲ್ಲಿರುವ ಏರ್ ಬ್ಯಾಗ್ ಬಿಚ್ಚಿದರೂ ಕೂಡಾ ಇಬ್ಬರ ಪ್ರಾಣ ಮಾತ್ರ ಉಳಿದಿಲ್ಲ ಎಂಬ ಮಾಹಿತಿ ಲಭ್ಯವಾಗಿದೆ.

ಆಸ್ಪತ್ರೆಗೆ ಗದಗ ಎಸ್ಪಿ ಬಿ.ಎಸ್. ನೇಮಗೌಡ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗದಗ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಕತ್ತು ಕೊಯ್ದು ಪ್ರೇಯಸಿಯ ಬರ್ಬರ ಹತ್ಯೆ ಮಾಡಿದ ಪ್ರಿಯಕರ




ಹಾಸನ: ಪ್ರೇಮ ವೈಫಲ್ಯದಿಂದ ಪ್ರಿಯಕರ ತನ್ನ ಪ್ರೇಯಸಿಯ ಕತ್ತು ಕುಯ್ದು ಬರ್ಬರವಾಗಿ ಹತ್ಯೆಗೈದ ಘಟನೆ ಹಾಸನ ತಾಲೂಕಿನ ಕುಂತಿಗುಡ್ಡದಲ್ಲಿ ನಡೆದಿದೆ.

ಸುಚಿತ್ರಾ (20) ಕೊಲೆಯಾದ ಯುವತಿ. ತೇಜಸ್ (23) ಕೊಲೆ ಮಾಡಿರುವ ಪ್ರಿಯಕರ. ಸುಚಿತ್ರಾ ಆಲೂರು ತಾಲೂಕಿನ ಕವಳಗೆರೆ ಗ್ರಾಮದವಳಾಗಿದ್ದು, ಮೊಸಳೆಹೊಸಳ್ಳಿ ಎಂಜಿನಿಯರ್ ಕಾಲೇಜಿನಲ್ಲಿ ಬಿಇ ಮೆಕ್ಯಾನಿಕಲ್ ಪದವಿ ಓದುತ್ತಿದ್ದಳು. ಮೂಲತಃ ಹಾಸನ ತಾಲೂಕಿನ ಶಂಕರನಹಳ್ಳಿ ಗ್ರಾಮದವನಾದ ತೇಜಸ್ ಸುಚಿತ್ರಾಳ ಕತ್ತು ಕೊಯ್ದು ಬರ್ಬರವಾಗಿ ಕೊಲೆಗೈದಿದ್ದಾನೆ.

ಪ್ರೀತಿಸಲು ನಿರಾಕರಿಸಿದ್ದಕ್ಕೆ ತೇಜಸ್ ಸುಚಿತ್ರಾಳನ್ನು ತನ್ನೊಂದಿಗೆ ಕುಂತಿಬೆಟ್ಟಕ್ಕೆ ಕರೆದೊಯ್ದಿದ್ದಾನೆ. ಇಂದು ಮುಂಜಾನೆ ಯುವತಿಯನ್ನು ಒಂಟಿಯಾಗಿ ಕರೆದೊಯ್ದು ಬಳಿಕ ಕುತ್ತಿಗೆ ಸೀಳಿ ಹತ್ಯೆ ಮಾಡಿದ್ದಾನೆ. ಘಟನೆ ಬಳಿಕ ಆರೋಪಿ ತೇಜಸ್ ಎಸ್ಕೇಪ್ ಆಗಿದ್ದ. ತೇಜಸ್ ಕೂಡಾ ಮೊಸಳೆಹೊಸಳ್ಳಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಪದವಿ ಮುಗಿಸಿದ್ದ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಹಾಸನ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


## ಬಳ್ಳಾರಿ ಬಿಜೆಪಿ ಸಂಸದನ ಪುತ್ರನ ವಿರುದ್ಧ ಲವ್, ಸೆಕ್ಸ್, ದೋಖಾ ಆರೋಪ: ಎಫ್ಐಆರ್ ದಾಖಲು

ಬೆಂಗಳೂರು: ಬಳ್ಳಾರಿ ಬಿಜೆಪಿ ಸಂಸದ ದೇವೇಂದ್ರಪ್ಪ ಅವರ ಪುತ್ರ ರಂಗನಾಥ್ ಅವರು ಯುವತಿಯೊಬ್ಬರಿಗೆ ಮದುವೆಯಾಗುವುದಾಗಿ ನಂಬಿಸಿ, ಆಕೆಯೊಂದಿಗೆ ದೈಹಿಕ ಸಂಪರ್ಕ ಬೆಳೆಸಿ ವಂಚಿಸಿದ ಆರೋಪ ಕೇಳಿಬಂದಿದೆ.

ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಉಪನ್ಯಾಸರಾಗಿ ಕಾರ್ಯನಿರ್ವಹಿಸುತ್ತಿರುವ ರಂಗನಾಥ್ ಅವರ ವಿರುದ್ಧ ಬೆಂಗಳೂರು ಮೂಲದ ಯುವತಿ ಪೊಲೀಸರಿಗೆ ದೂರು ನೀಡಿದ್ದು, ಮದುವೆಯಾಗುವುದಾಗಿ ನಂಬಿಸಿ ಲೈಂಗಿಕವಾಗಿ ಬಳಿಸಿಕೊಂಡು ಇದೀಗ ಮೋಸ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಯುವತಿ ನೀಡಿದ ದೂರಿನ ಆಧಾರದ ಮೇಲೆ ಬೆಂಗಳೂರಿನ ಬಸವನಗುಡಿ ಮಹಿಳಾ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ.

ಒಂದೂವರೆ ವರ್ಷದ ಹಿಂದೆ ಪಾರ್ಟಿವೊಂದರಲ್ಲಿ ಯುವತಿಯನ್ನು ಪರಿಚಯ ಮಾಡಿಕೊಂಡಿರುವ ರಂಗನಾಥ್, ಬಳಿಕ



ಮೈಸೂರಿನ ಹೋಟೆಲ್ನಲ್ಲಿ ಆಕೆಯ ಜೊತೆ ಲೈಂಗಿಕ ಸಂಪರ್ಕ ಬೆಳೆಸಿದ್ದಾರೆ ಎಂದು ಆರೋಪಿಸಲಾಗಿದೆ.

ಆದರೆ ಈಗ ಮದುವೆಯಾಗಲು ಹಿಂದೇಟು ಹಾಕುತ್ತಿದ್ದಾರೆ ಎಂದು ಯುವತಿ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಪ್ರಕರಣ ದಾಖಲಿಸಿಕೊಂಡಿರುವ ಬಸವನಗುಡಿ ಮಹಿಳಾ ಪೊಲೀಸ್ ಠಾಣೆಯ ಪೊಲೀಸರು ಇಬ್ಬರಿಗೂ ನೋಟಿಸ್ ಜಾರಿ ಮಾಡಿದ್ದಾರೆ. ವಿಚಾರಣೆಗೆ ಬರುವಂತೆ ರಂಗನಾಥ್ ಅವರಿಗೆ ನೋಟಿಸ್ ನೀಡಲಾಗಿದೆ ಮತ್ತು ಯುವತಿಗೆ ಸೂಕ್ತ ದಾಖಲೆ ಸಮೇತ ಠಾಣೆಗೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಲಾಗಿದೆ.

ರಂಗನಾಥ್ ಅವರು ಸಹ ಯುವತಿ ವಿರುದ್ಧ ಮೈಸೂರು ನಗರದ ವಿಜಯನಗರ ಪೊಲೀಸ್ ಠಾಣೆಯಲ್ಲಿ ಪ್ರತಿ ದೂರು ದಾಖಲಿಸಿದ್ದಾರೆ.

ನನ್ನ ಖಾಸಗಿ ಫೋಟೋಗಳು ಮತ್ತು ವಿಡಿಯೋಗಳನ್ನು ಇಟ್ಟುಕೊಂಡು ಯುವತಿ ನನಗೆ ಬ್ಲಾಕ್‌ಮೇಲ್ ಮಾಡುತ್ತಿದ್ದು, 15 ಲಕ್ಷ ರೂ.ಗೆ ಬೇಡಿಕೆ ಇಟ್ಟಿರುವುದಾಗಿ ಎಂದು ಆರೋಪಿಸಿದ್ದಾರೆ.

ಈ ಸಂಬಂಧ ವಿಜಯನಗರ ಪೊಲೀಸರು ಸಂತ್ರಸ್ಥ ಯುವತಿ ಮತ್ತು ಮತ್ತೊಬ್ಬ ವ್ಯಕ್ತಿ ಶ್ರೀನಿವಾಸ್ ಎಂಬುವವರ ವಿರುದ್ಧ ದೂರು ದಾಖಲಿಸಿದ್ದಾರೆ.

## ಮಕ್ಕಳಲ್ಲಿ ಹೆಚ್ಚುತ್ತಿರುವ ಡಯಾಬಿಟಿಸ್: ವೈದ್ಯರಿಂದ ಶಾಲೆಗಳಲ್ಲಿ ಮಧುಮೇಹ ಅಭಿಯಾನ ಆರಂಭ

ಬೆಂಗಳೂರು: ಮಕ್ಕಳಲ್ಲಿ ಹೆಚ್ಚುತ್ತಿರುವ ಮಧುಮೇಹವನ್ನು ನಿಯಂತ್ರಿಸುವ ಉದ್ದೇಶದಿಂದ, ವೈದ್ಯರು ರೋಗದ ಕಾರಣಗಳು ಮತ್ತು ಅದನ್ನು ತ್ವರಿತವಾಗಿ ನಿಭಾಯಿಸುವ ವಿಧಾನಗಳ ಬಗ್ಗೆ ಶಾಲೆಗಳಲ್ಲಿ ಶಿಕ್ಷಣದ ಜೊತೆಗೆ ಅರಿವು ಮೂಡಿಸಲು ಮುಂದಾಗಿದ್ದಾರೆ.

ಕರ್ನಾಟಕ ರಿಸರ್ಚ್ ಸೊಸೈಟಿ ಫಾರ್ ದಿ ಸ್ಟಡಿ ಆಫ್ ಡಯಾಬಿಟಿಸ್ ಇನ್ ಇಂಡಿಯಾ (KRSSDI) ಅಧ್ಯಕ್ಷ ಡಾ.ಮನೋಹರ್ ನಾಗೇಶಪ್ಪ, ವಿಶೇಷವಾಗಿ ಸಾಂಕ್ರಾಮಿಕ ಯುಗದಲ್ಲಿ ಜೀವನಶೈಲಿಯಲ್ಲಿನ ಬದಲಾವಣೆಯಿಂದಾಗಿ ಮಕ್ಕಳಲ್ಲಿ ಮಧುಮೇಹ ಪ್ರಕರಣಗಳು ಹೆಚ್ಚಾಗುತ್ತಿವೆ. ಕಳಪೆ ಆಹಾರ ಪದ್ಧತಿ ಮತ್ತು ಜಡ ಜೀವನಶೈಲಿಯು ಮಕ್ಕಳಲ್ಲಿ ಟೈಪ್ –2 ಮಧುಮೇಹವನ್ನು ಪತ್ತೆಹಚ್ಚಲು ಪ್ರಮುಖ ಕಾರಣಗಳಾಗಿವೆ. ಹಿಂದೆ, ಹೆಚ್ಚಿನ ಮಕ್ಕಳು




ಪೋಷಕರಿಂದ ತಳೀಯವಾಗಿ ಹರಡುವ ಟೈಪ್ –1 ಮಧುಮೇಹದಿಂದ ಬಳಲುತ್ತಿದ್ದರು ಎನ್ನುತ್ತಾರೆ.

ಕಳೆದ ಎರಡ್ಮೂರು ತಿಂಗಳಿನಿಂದ ಬೆಂಗಳೂರಿನ ಹಲವಾರು ಶಾಲೆಗಳಲ್ಲಿ ವೈದ್ಯರು ಜಾಗೃತಿ ಅಭಿಯಾನವನ್ನು ಆಯೋಜಿಸುತ್ತಿದ್ದಾರೆ. ಈಗ ಅದನ್ನು ಕರ್ನಾಟಕದ ಇತರ ಜಿಲ್ಲೆಗಳಿಗೂ ವಿಸ್ತರಿಸುತ್ತಿದ್ದಾರೆ. ಮಧುಮೇಹ ಪಾಠಶಾಲಾ ಮತ್ತು ಮಧುಮೇಹ ಸಂವಾದ ಅಭಿಯಾನದ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ಟೈಪ್–2 ಮಧುಮೇಹದ ಬಗ್ಗೆ ಶಿಕ್ಷಣ ನೀಡುತ್ತಿದ್ದಾರೆ. ಎಲ್ಲಾ ವಿದ್ಯಾರ್ಥಿಗಳು ಮಧುಮೇಹ–ಸಂಬಂಧಿತ ಪ್ರಶ್ನಾವಳಿಗಳನ್ನು ನಮೂದಿಸುವ ಫಾರ್ಮ್‌ಗಳನ್ನು ಭರ್ತಿ ಮಾಡಬೇಕು, ಅದನ್ನು ವೈದ್ಯರು ನಂತರ ಮೌಲ್ಯಮಾಪನ ಮಾಡುತ್ತಾರೆ.

ಕೆಆರ್‌ಆರ್‌ಎಸ್‌ಡಿಐನ ಜನರಲ್ ಕೌನ್ಸಿಲ್ ಸದಸ್ಯ ಡಾ ಶ್ರೀಧರ್ ಕೆ ಅವರ ಉಪಕ್ರಮವಾಗಿದ್ದು, ನಿಯಮಿತ ವ್ಯಾಯಾಮದ ಆರೋಗ್ಯ ಪ್ರಯೋಜನಗಳ ಬಗ್ಗೆ ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಸೂಕ್ತ ಮಾಹಿತಿಯನ್ನು ಒದಗಿಸುತ್ತಿದೆ ಎಂದರು.

ನವೆಂಬರ್ ತಿಂಗಳನ್ನು ವಿಶ್ವ ಮಧುಮೇಹ ಜಾಗೃತಿ ತಿಂಗಳಾಗಿ ಆಚರಿಸಲಾಗುತ್ತದೆ, ಮಧುಮೇಹವು ಹೆಚ್ಚುತ್ತಿರುವ ನಾಳೀಯ ರೋಗಗಳು ಪ್ರಮುಖ ಕಾರಣವಾಗಿದೆ ಎಂದು ವೈದ್ಯರು ಎಚ್ಚರಿಸಿದ್ದಾರೆ. ಈ ಏರಿಕೆಯು ಮುಂಬರುವ ವರ್ಷಗಳಲ್ಲಿ ಹೆಚ್ಚಿದ ರೋಗ ಮತ್ತು ಮರಣ ಪ್ರಮಾಣಕ್ಕೆ ಕಾರಣವಾಗುತ್ತದೆ ಎಂದು ಎಚ್ಚರಿಸಿದ್ದಾರೆ.

### ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ
### ಜ್ಞಾನ ಸಂಗಮ, ಬೆಳಗಾವಿ–590018, ಕರ್ನಾಟಕ

ಕ್ರಮ ಸಂಖ್ಯೆ: ವಿ.ತಾ.ವಿ./ಬೆ/ಸ್ಥಾ.ಅ./2023–24/ಐ.ಎಫ್.ಟಿ.ನಂ.34/4155 ದಿನಾಂಕ:16 NOV 2023

**ಟೆಂಡರ ಪ್ರಕಟಣೆ**

ಕುಲಸಚಿವರು, ವಿತಾವಿ, ಬೆಳಗಾವಿ ಇವರಿಂದ ಅರ್ಹ ಗುತ್ತಿಗೆದಾರರಿಂದ / ಫರ್ಮ/ಏಜನ್ಸಿದಾರರಿಂದ ಸ್ಟ್ಯಾಂಡರ್ಡ ಟೆಂಡರ ಡಾಕ್ಯುಮೆಂಟ್ಸ ಕೆ.ಡಬ್ಲ್ಯೂ/ ಕೆ.ಜಿ.ರ ಮೂಲಕ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕೆಲಸದ ಹೆಸರುಗಳು:–1)ವಿತಾವಿ, “ಜ್ಞಾನ ಸಂಗಮ”, ಬೆಳಗಾವಿ ಆವರಣದ ಕ್ರೀಡಾ ಹಾಗೂ ವಿತಾವಿ ಐ–ನ್ಯಾಕ್ ವಿಭಾಗದಲ್ಲಿ ರಿಪೇರಿ ಹಾಗೂ ನಿರ್ವಹಣೆ ಕಾರ್ಯಗಳನ್ನು ಕೈಗೊಳ್ಳುವ ಕೆಲಸದ ಮೊತ್ತ ರೂ.3,89,089/– ಮತ್ತು 2)ವಿತಾವಿ, “ಜ್ಞಾನ ಸಂಗಮ”, ಬೆಳಗಾವಿ ಆವರಣದ ಕಂಪ್ಯೂಟರ್ ಸಾಯನ್ಸ ವಿಭಾಗಕ್ಕೆ ಕಂಪ್ಯೂಟರ್ ಚೇರ್‌ಗಳನ್ನು ಸರಬರಾಜು ಮಾಡುವುದು ಮತ್ತು ಒದಗಿಸುವ ಮೊತ್ತ ರೂ.4,19,250/–. ಇತರೆ ಮಾಹಿತಿಗಳನ್ನು http//www.vtu.ac.in/tenders ವೆಬ್‌ಸೈಟ್ ಮೂಲಕ ದಿನಾಂಕ:17.11.2023 ರಿಂದ ಪಡೆದುಕೊಳ್ಳಬಹುದು.

ಸಹಿ/– ಕುಲಸಚಿವರು,ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,ಬೆಳಗಾವಿ

DIPR/BGM/RO-NO-621/KSMCA/2023-24

## ಬರ ನಿರ್ವಹಣೆ: ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸಭೆ

# ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಟ್ಯಾಂಕರ್ ಖರೀದಿಗೆ ಕಟ್ಟುನಿಟ್ಟಿನ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಕುಡಿಯುವ ನೀರು ಸಮಸ್ಯೆ ಕಂಡುಬಂದ ತಕ್ಷಣವೇ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ಕುಡಿಯುವ ನೀರು ಸಮಸ್ಯೆ ನಿವಾರಣೆಗೆ ಅನುಕೂಲವಾಗುವಂತೆ ಜಿಲ್ಲೆಯ ಪ್ರತಿಯೊಂದು ಪಂಚಾಯಿತಿಗಳು ಕೂಡಲೇ ಸ್ವಂತ ಟ್ಯಾಂಕರ್ ಖರೀದಿಸಲು ಕ್ರಮ ಕೈಗೊಳ್ಳಬೇಕು ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸೂಚನೆ ನೀಡಿದರು.

ಬರ ನಿರ್ವಹಣೆ ಕುರಿತು ಸುವರ್ಣ ವಿಧಾನಸೌಧದಲ್ಲಿ ಶುಕ್ರವಾರ (ನ.17) ನಡೆದ ಜನಪ್ರತಿನಿಧಿಗಳು ಹಾಗೂ ಹಿರಿಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ಗ್ರಾಮ ಪಂಚಾಯಿತಿಗೆ ಒಂದು ಸ್ವಂತ ಟ್ಯಾಂಕರ್ ಹೊಂದಲು ಕೆಲವು ವರ್ಷಗಳ ಹಿಂದೆ ತಿಳಿಸಲಾಗಿತ್ತು. ಆದ್ದರಿಂದ ಈ ಬಾರಿ ಪ್ರತಿ ಗ್ರಾಮ ಪಂಚಾಯಿತಿ ಕಡ್ಡಾಯವಾಗಿ ಟ್ಯಾಂಕರ್ ಖರೀದಿಸಿ ತಮಗೆ ಪಟ್ಟಿ ಒದಗಿಸಬೇಕು ಎಂದು ತಿಳಿಸಿದರು.

ಒಂದು ವೇಳೆ ಟ್ಯಾಂಕರ್ ಖರೀದಿ ಮಾಡದೇ ಇದ್ದರೆ ಸಂಬಂಧಿಸಿದ ಗ್ರಾಮ ಪಂಚಾಯಿತಿ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಕುಡಿಯುವ ನೀರಿನ ಸಮಸ್ಯೆಗೆ ಸಂಬಂಧಿಸಿದಂತೆ ಟಾಸ್ಕ್ ಫೋರ್ಸ್ ಸಭೆಗಳನ್ನು ನಡೆಸಿ ಸೂಕ್ತ ಯೋಜನೆ ರೂಪಿಸಬೇಕು ಎಂದರು.

ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಾಗಿರುವುದರಿಂದ ರೈತರು ಸಂಕಷ್ಟದಲ್ಲಿದ್ದಾರೆ. ಆದ್ದರಿಂದ ಬೆಳೆ ಪರಿಹಾರ ಹಾಗೂ ಮೇವು ಪೂರೈಕೆಗೆ ಕ್ರಮ ವಹಿಸಬೇಕು ಎಂದರು. ನರೇಗಾ ಯೋಜನೆಯಡಿ ಸಮರ್ಪಕ ಬರ ನಿರ್ವಹಣೆಗೆ ಅನುಕೂಲವಾಗುವಂತಹ ಮತ್ತು ಶಾಶ್ವತ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕು ಎಂದು ತಿಳಿಸಿದರು.

**ಜಲಜೀವನ ಮಿಷನ್ ಯೋಜನೆ ಪೂರ್ಣಗೊಳಿಸಲು ಸೂಚನೆ:**

ಬಹುತೇಕ ಕಡೆ ಜಲಜೀವನ ಮಿಷನ್ ಯೋಜನೆಯ ಕಾಮಗಾರಿಗಳು ಅಪೂರ್ಣವಾಗಿವೆ ಹಾಗೂ ಕಳಪೆಯಾಗಿವೆ ಎಂದು ಸಾರ್ವಜನಿಕರಿಂದ ದೂರುಗಳು ಬರುತ್ತಿವೆ.

ಆದ್ದರಿಂದ ಕುಡಿಯುವ ನೀರಿನ ಯೋಜನೆಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ಬರ ನಿರ್ವಹಣೆಗೆ ರಾಜ್ಯ ಸರಕಾರ ಈಗಾಗಲೇ ಜಿಲ್ಲೆಗೆ 22.50 ಕೋಟಿ ಬಿಡುಗಡೆ ಮಾಡಿದ್ದು, ಒಟ್ಟಾರೆ 32 ಕೋಟಿ ರೂಪಾಯಿ ಹಣ ಲಭ್ಯವಿರುತ್ತದೆ. ಬರ ನಿರ್ವಹಣೆ ಕಾಮಗಾರಿಗಳಿಗೆ ಹಣಕಾಸಿನ ತೊಂದರೆಯಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ತಿಳಿಸಿದರು.



**422 ಕೋಟಿ ರೂಪಾಯಿ ಪರಿಹಾರಕ್ಕೆ ಮನವಿ:**

ಮುಂಗಾರು ಮಳೆ ಕೊರತೆ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಹಿಂಗಾರು ಹಂಗಾಮಿನ ಬೆಳೆಗಳಿಗೆ ತೇವಾಂಶ ಕೊರತೆಯಾಗಿದೆ. ಪರ್ಯಾಯ ಬೆಳೆಗೆ ಅಗತ್ಯವಿರುವ ಬಿತ್ತ ಬೀಜ ದಾಸ್ತಾನು ಇರುತ್ತದೆ. ಬೀಜ-ಗೊಬ್ಬರಗಳ ಕೊರತೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

3.53 ಲಕ್ಷ ಹೆಕ್ಟೇರ್ ಕೃಷಿ ಬೆಳೆ ಹಾಗೂ 11,814 ಹೆ. ಸೇರಿ ಜಿಲ್ಲೆಯಲ್ಲಿ ಒಟ್ಟಾರೆ 3.65 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿರುತ್ತದೆ. ರಾಜ್ಯ ಸರಕಾರ 22.50 ಕೋಟಿ ಬಿಡುಗಡೆ ಮಾಡಿದ್ದು, ಒಟ್ಟಾರೆ 31 ಕೋಟಿ ರೂಪಾಯಿ ಜಿಲ್ಲಾಡಳಿತದ ಬಳಿ ಇರುತ್ತದೆ. ಬರ ನಿರ್ವಹಣೆಗೆ ಹಣದ ಕೊರತೆ ಇರುವುದಿಲ್ಲ. ಎನ್.ಡಿ.ಆರ್.ಎಫ್. ನಿಯಮಾವಳಿ ಪ್ರಕಾರ 422 ಕೋಟಿ ಪರಿಹಾರ ಕೇಂದ್ರ ಸರಕಾರದಿಂದ ಬಿಡುಗಡೆಯಾಗಬೇಕಿದೆ

ಜಾನುವಾರುಗಳಿಗೆ ಸದ್ಯಕ್ಕೆ ಮೇವಿನ ಕೊರತೆ ಇರುವುದಿಲ್ಲ. ಜನವರಿ ಬಳಿಕ ಅಗತ್ಯವಿರುವ ಮೇವು ಖರೀದಿಗೆ ಟೆಂಡರ್ ಕರೆಯಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಮುಂಬರುವ ದಿನಗಳಲ್ಲಿ ಕುಡಿಯುವ ನೀರು ಸಮಸ್ಯೆ ನಿರ್ವಹಣೆಗೆ ಹಾಗೂ ಟ್ಯಾಂಕರ್ ಮೂಲಕ ನೀರು ಪೂರೈಕೆಗೆ ಯೋಜನೆ ರೂಪಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಮೇವು ಸಾಗಾಣಿಕೆಗೆ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ವಿವರಿಸಿದರು. ಆಯಾ ಕ್ಷೇತ್ರಗಳ ಶಾಸಕರ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಸಭೆಯನ್ನು ನಡೆಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್, ಕುಡಿಯುವ ನೀರು ಸಮಸ್ಯೆ ನಿರ್ವಹಣೆಗೆ ಯೋಜನೆ ರೂಪಿಸಲಾಗಿದೆ. ಟ್ಯಾಂಕರ್ ನೀರು ಪೂರೈಕೆ ಹಾಗೂ ಕೊಳವೆಬಾವಿ ದುರಸ್ತಿ ಮತ್ತಿತರ ಕೆಲಸಗಳಿಗೆ 35 ಕೋಟಿ ರೂಪಾಯಿ ವೆಚ್ಚದ ಪ್ರಸ್ತಾವನೆ ಸರಕಾರಕ್ಕೆ ಸಲ್ಲಿಸಲಾಗಿದೆ ಎಂದು ವಿವರಿಸಿದರು.

ಕೆರೆಗಳ ನೀರನ್ನು ಕುಡಿಯುವ ನೀರಿಗಾಗಿ ಮೀಸಲಿಡಲು ಉಪ ವಿಭಾಗಾಧಿಕಾರಿಗಳು ತಮ್ಮ ವ್ಯಾಪ್ತಿಯ ಕೆರೆಗಳ ನೀರು ಸಮರ್ಪಕ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಬೇಸಿಗೆ ಸಂದರ್ಭದಲ್ಲಿ ಮಹಾರಾಷ್ಟ್ರದಿಂದ ಎರಡು ಬಾರಿ ಕುಡಿಯುವ ನೀರು ಬಿಡುಗಡೆ ಮಾಡಲಾಗುತ್ತದೆ. ಈ ಬಾರಿ ತೀವ್ರ ಸಮಸ್ಯೆ ಎದುರಾಗುವ ಸಾಧ್ಯತೆಗಳಿರುವುದರಿಂದ ಈ ಬಗ್ಗೆ ಅಧಿಕಾರಿಗಳ ಮಟ್ಟದಲ್ಲಿ ಮುಂಚಿತವಾಗಿಯೇ ಚರ್ಚೆ ನಡೆಸಬೇಕು ಎಂದು ತಿಳಿಸಿದರು.

ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ, ಅವರು ಕುಡಚಿ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಅವರು, ಏಪ್ರಿಲ್ ವೇಳೆಗೆ ಬರಗಾಲದ ತೀವ್ರ ಸಮಸ್ಯೆಗಳು ಕಂಡುಬರಲಿವೆ. ಆದ್ದರಿಂದ ಕುಡಿಯುವ ನೀರು, ವಿದ್ಯುತ್, ಜಾನುವಾರುಗಳಿಗೆ ಮೇವು ಮತ್ತಿತರ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಭೂಸ್ವಾಧೀನ ಮಾಡಿಕೊಂಡೂ ಬಳಕೆ ಮಾಡದಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ದಾಖಲಾತಿಗಳ ದೊರಕದಿರುವುದರಿಂದ ರೈತರು ಸಮಸ್ಯೆ ಎದುರಿಸುತ್ತಿದ್ದಾರೆ. ಆದ್ದರಿಂದ ಕಂದಾಯ, ವಿಶೇಷ ಭೂಸ್ವಾಧೀನಾಧಿಕಾರಿಗಳು, ನೀರಾವರಿ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದರು.

ಸವದತ್ತಿ ಶಾಸಕ ವಿಶ್ವಾಸ ವೈದ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ್ ಗುಳೇದ, ನದಿತೀರದಲ್ಲಿ ನೀರಾವರಿಗಾಗಿ ಅಳವಡಿಸಲಾಗಿರುವ ಪಂಪ್ ಸೆಟ್ ಕಳ್ಳತನ ಪ್ರಕರಣಗಳನ್ನು ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು, ಪಶುವೈದ್ಯಕೀಯ ಇಲಾಖೆಯ ವತಿಯಿಂದ ರೈತರಿಗೆ ಮೇವಿನ ಕಿಟ್ ಗಳನ್ನು ವಿತರಣೆ ಮಾಡಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ವಿವಿಧ ಯೋಜನೆಗಳಡಿ ಸಹಾಯಧಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023-24 ನೇ ಸಾಲಿಗೆ ದೀನ್ ದಯಾಳ್ ಅಂತ್ಯೋದಯ (ಡೇ-ನಲ್ಮ್ ಯೋಜನೆ) ಯೋಜನೆಯಡಿ ಮಚ್ಚೆ ಪಟ್ಟಣ ಪಂಚಾಯತಿಯ ವ್ಯಾಪ್ತಿಯ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ವಿವಿಧ ಯೋಜನೆಗಳಡಿ ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ, ವೈಯಕ್ತಿಕ ಉದ್ಯಮಶೀಲತೆ ಯೋಜನೆಯಡಿ ಕಿರು ಉದ್ದಮೆ ಕೈಗೊಳ್ಳಲು 2 ಲಕ್ಷದವರೆಗೆ ಸಾಲ ಪಡೆಯಬಹುದಾಗಿದೆ. ವೈಯಕ್ತಿಕ ವಿವಿಧ ಸ್ವಯಂ ಉದ್ಯೋಗವನ್ನು ಕೈಗೊಳ್ಳಲು ಉದ್ಯೋಗದ ಸ್ಥಾಪನೆಗಾಗಿ ಬ್ಯಾಂಕ ಸಾಲದ ಮೇಲೆ ಬಡ್ಡಿದರ ಶೇ.7 ಕ್ಕಿಂತ ಮೇಲ್ಪಟ್ಟಿದ್ದರೆ ಬಡ್ಡಿ ಸಹಾಯಧನ ಪಡೆಯಬಹುದು.

ಸದರಿ **Interest Subsidy** ಯನ್ನು ಕಾಲಕಾಲಕ್ಕೆ ಸರಿಯಾಗಿ ಸಾಲವನ್ನು ಮರುಪಾವತಿಸುವ ವ್ಯಕ್ತಿಗಳಿಗೆ ಮಾತ್ರ ನೀಡಲಾಗುವದು.

ಸ್ವಯಂ ಉದ್ಯೋಗಕ್ಕಾಗಿ ಉದ್ಯಮಶೀಲತೆ ಯೋಜನೆಯಡಿ ವಿವಿಧ ಸ್ವಯಂ ಉದ್ಯೋಗವನ್ನು ಕೈಗೊಳ್ಳಲು ಲಿಂಕೇಜ್ ಉದ್ಯಮಶೀಲತೆ ಪ್ರಾರಂಭಿಸಲು ಪ್ರತಿ ಸದಸ್ಯರಿಗೆ ಗರಿಷ್ಟ 2 ಲಕ್ಷ ರೂಪಾಯಿ ಅಥವಾ 10 ಲಕ್ಷ ರೂಪಾಯಿ ಯಾವುದು ಯೋಜನಾ ವೆಚ್ಚ ಕಡಿಮೆ ಇರುತ್ತದೆಯೋ ಅದಕ್ಕೆ ಅನುಮೋದನೆ ನೀಡಲಾಗುವುದು.

ಕಾಲಕಾಲಕ್ಕೆ ಸಾಲವನ್ನು ಸರಿಯಾಗಿ ಮರುಪಾವತಿಸುವ ಸ್ವ-ಸಹಾಯ ಸಂಘಗಳಿಗೆ ಹೆಚ್ಚುವರಿಯಾಗಿ ಶೇ.3 ರಷ್ಟು ಬಡ್ಡಿ ಸಹಾಯಧನವನ್ನು ಪೈಸ್ ಪೋರ್ಟಲ್ ಮೂಲಕ ಬಿಡುಗಡೆ ಮಾಡಲಾಗುವದು. ಡಿ.1 2023 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಸ್ವ-ಸಹಾಯ ಗುಂಪುಗಳ ರಚನೆ:

ಗುಂಪಿನ ಸದಸ್ಯರ ನಡುವೆ ನಿರಂತರ ಉಳಿತಾಯವನ್ನು ಮಾಡುವಂತೆ ಪ್ರೇರೆಪಿಸುವದು, ಗುಂಪಿನಲ್ಲಿ ಸದಸ್ಯತ್ವವನ್ನು ಪಡೆಯುವಾಗ 18 ವರ್ಷ ಮೇಲ್ಪಟ್ಟಿರಬೇಕು, ಒಂದು ಗುಂಪಿನಲ್ಲಿ ಒಂದು ಕುಟುಂಬದ ಒಬ್ಬರಿಗೆ ಮಾತ್ರ ಸದಸ್ಯತ್ವವನ್ನು ಪಡೆಯುವುದು. ಗುಂಪಿನಲ್ಲಿ ಸದಸ್ಯರ ಸಂಖ್ಯೆಯು 10 ಕ್ಕಿಂತ ಮೇಲೆ 20 ಕ್ಕಿಂತ ಒಳಗಡೆಯಿರಬೇಕು.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.machchetp.mrc.gov.in ನಲ್ಲಿ ಮಾಹಿತಿ ಪಡೆಯಬಹುದು ಹಾಗೂ ಮಚ್ಚೆ ಪಟ್ಟಣ ಪಂಚಾಯತಿ ಸಿ.ಎ.ಓ ಜಿ.ವಿ.ಹಣ್ಣಿಕೇರಿ ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಮಚ್ಚೆ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಿರಿಜನ ಉಪಯೋಜನೆಯಡಿ ಸಂಘ-ಸಂಸ್ಥೆಗಳಿಗೆ ಧನಸಹಾಯ ನೀಡಲು ಅರ್ಜಿಗಳ ಆಹ್ವಾನ

ಬೆಳಗಾವಿ: 2023-24ನೇ ಸಾಲಿನ ಸಾಮಾನ್ಯ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ರಾಜ್ಯಾದ್ಯಂತ ಹಾಗೂ ಹೊರರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಪ್ರೋತ್ಸಾಹ ರೂಪದಲ್ಲಿ ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ರಾಜ್ಯ ಹಾಗೂ ಹೊರರಾಜ್ಯಗಳಲ್ಲಿ ಸಾಂಸ್ಕೃತಿಕ ವಾತಾವರಣ ಉಂಟುಮಾಡುವಲ್ಲಿ ಶ್ರಮಿಸುತ್ತಿರುವ ಸಂಘ-ಸಂಸ್ಥೆಗಳಿಗೆ ಆದ್ಯತೆ ನೀಡಲಾಗುವುದು.

ಸೇವಾಸಿಂಧು Sevasindhu.karnataka.gov, in ಮುಖಾಂತರ ನ.14 2023 ರಿಂದ ಡಿ. 13 2023 ರೊಳಗಳಗಾಗಿ ಅರ್ಜಿಗಳನ್ನು ಸಲ್ಲಿಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಯ ವ್ಯವಸ್ಥಾಪಕರು, ಸೇವಾ ಸಿಂಧು ಸಂಪರ್ಕಿಸಬಹುದು ಹಾಗೂ ದೂರವಾಣಿ ಸಂಖ್ಯೆ 08022279954, 9986837037, 8792662814, 8792662816, 08022213530 ಗೆ ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ

ಬೆಳಗಾವಿ: ಬೆಳಗಾವಿಯ ಹೆಸ್ಕಾಂ ನಗರ ಉಪ-ವಿಭಾಗ-3 ರ ನೆಹರೂ ನಗರ ಕಛೇರಿಯಲ್ಲಿ "ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ" ಸಭೆಯು ಕಾ&ಪಾ, ನಗರ ಉಪವಿಭಾಗ-03, ಹುವಿಸಕಂನಿ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್ರು), ಇವರ ಅಧ್ಯಕ್ಷತೆಯಲ್ಲಿ ನವೆಂಬರ್ 18, 2023, 3 ನೇ ಶನಿವಾರ ಬೆಳಿಗ್ಗೆ 10.30 ಗಂಟೆಗೆ ಕಾರ್ಯ ಮತ್ತು ಪಾಲನೆ, ನಗರ ಉಪ ವಿಭಾಗ ನಂ-3 ರ ಕಛೇರಿಯಲ್ಲಿ ಆಯೋಜಿಸಲಾಗಿದೆ.

ಆದ್ದರಿಂದ ವಿದ್ಯುತ್ ಗ್ರಾಹಕರು ತಮ್ಮ ಸಮಸ್ಯೆ/ಕುಂದು-ಕೊರತೆಗಳನ್ನು ಸದರಿ ಸಭೆಯಲ್ಲಿ ಭಾಗವಹಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಕಾ&ಪಾ ನಗರ ಉಪ ವಿಭಾಗ ನಂ-3ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎರಡು ದಿನ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಆದೇಶ

ತುಮಕೂರು: ನಗರದಲ್ಲಿ ನವೆಂಬರ್ 18 ಮತ್ತು 19ರಂದು ಒಟ್ಟು 10 ಪರೀಕ್ಷಾ ಕೇಂದ್ರಗಳಲ್ಲಿ ವಿವಿಧ ನಿಗಮ ಮಂಡಳಿಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದ್ದು, ಪರೀಕ್ಷೆಯನ್ನು ಲೋಪದೋಷವಿಲ್ಲದಂತೆ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಕೆ.ಶ್ರೀನಿವಾಸ್ ಅವರು ಆದೇಶಿಸಿದ್ದಾರೆ.

ಕರ್ನಾಟಕ ರಾಜ್ಯ ವಿದ್ಯುನ್ಮಾನ ನಿಗಮ ನಿಯಮಿತ, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಮತ್ತು ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ ಸಂಸ್ಥೆಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ.

ತಾಲ್ಲೂಕು ಕಚೇರಿಗೆ ಸಚಿವ ಕೃಷ್ಣ ಬೈರೇಗೌಡ



ದಿಢೀರ್ ಭೇಟಿ: ಅಧಿಕಾರಿಗಳು ಕಕ್ಕಾಬಿಕ್ಕಿ/ ವಿಡಿಯೋ

ನಿಷೇಧಾಜ್ಞೆಯು ನವೆಂಬರ್ 18 ಮತ್ತು 19ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಜಾರಿಯಲ್ಲಿರುತ್ತದೆ.

ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಬೆರಳಚ್ಚು ಕೇಂದ್ರಗಳನ್ನು ಮುಚ್ಚತಕ್ಕದ್ದು. ನಿಷೇಧಾಜ್ಞೆಯು ಜಾರಿಯಲ್ಲಿರುವ ಅವಧಿಯಲ್ಲಿ ಅನಧಿಕೃತ ವ್ಯಕ್ತಿಗಳು ಯಾರೂ ನಿರ್ಬಂಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಹಾಗೂ ನಿಷೇಧಾಜ್ಞೆಯನ್ನು ಉಲ್ಲಂಘನೆ ಮಾಡಿದ ವ್ಯಕ್ತಿಗಳನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ.

ಕೆಲವು ಪ್ರಕರಣಗಳಲ್ಲಿ ದುರುದ್ದೇಶದಿಂದ ನಕಲಿ ಪ್ರಶ್ನೆಪತ್ರಿಕೆಗಳ ಫೋಟೋಗಳನ್ನು ತೆಗೆದು ವಾಟ್ಸಾಪ್ ಇತರೆ ಸಾಮಾಜಿಕ ಜಾಲತಾಣಗಳ ಮೂಲಕ ಕಳುಹಿಸಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿ ಮಾಡಲು ಅವಕಾಶವಿರುವುದರಿಂದ ಪರೀಕ್ಷೆಯ ಮುಖ್ಯ ಅಧೀಕ್ಷಕರಿಗೆ ಕ್ಯಾಮರಾ ಹೊಂದಿರುವ ಸಾಮಾನ್ಯ ಮೊಬೈಲ್ ಇರಿಸಿಕೊಳ್ಳಲು ಅವಕಾಶವಿದ್ದು, ಉಳಿದ ಎಲ್ಲಾ ಪರೀಕ್ಷಾ ಸಿಬ್ಬಂದಿ, ವಿದ್ಯಾರ್ಥಿಗಳು ಮೊಬೈಲ್ ತರುವುದು, ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮಕ್ಕಳ ದಿನಾಚರಣೆ ನಿಮಿತ್ತ ಸ್ಪರ್ಧೆ



ಬೆಳಗಾವಿ: ಗೋಕಾಕ ತಾಲೂಕಿನ ಶಿಂದಿಕುರಬೇಟ ಮಾಧ್ಯಮಿಕ ಶಾಲೆಯಲ್ಲಿ ಮಕ್ಕಳ ದಿನಾಚರಣೆ ನಿಮಿತ್ತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ವಿದ್ಯಾರ್ಥಿಗಳಿಗೆ ಮೋಜಿನ ಆಟ, ಮ್ಯಾಜಿಕ್ ಚೇರ್, ಲಿಂಬು ಚಮಚೆ, ಗೋಣಿ ಚೀಲ, ಮೂರು ಕಾಲಿನ ಓಟ ಸೇರಿದಂತೆ ಇತ್ಯಾದಿ ಆಟಗಳ ಸ್ಪರ್ಧೆ ಏರ್ಪಡಿಸಲಾಗಿತ್ತು. ವಿಜೇತರಿಗೆ ಬಹುಮಾನ ವಿತರಿಸಲಾಯಿತು.

2014-15ನೇ ಸಾಲಿನ ಸಾಧಕ ವಿದ್ಯಾರ್ಥಿಗಳಾದ ಯಾಸೀನ ಸೌದಾಗರ, ಇಲಿಯಾಸ ಮಕಾಂದಾರ, ಅಮಿತ ನಾಯ್ಕ ಇವರು ಆಗಮಿಸಿ ತಮ್ಮ ಅನುಭವ ಹಂಚಿಕೊಂಡರು. ಇವರು ಸದ್ಯ ಕೆಇಬಿಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಮುಖ್ಯಾಧ್ಯಾಪಕ ಪಿ. ಎಚ್. ಗೋಸಬಾಳ ಇವರು ಮಕ್ಕಳ ದಿನಾಚರಣೆ ಕುರಿತು ವಿವರಿಸಿದರು. ಎಸ್. ಎನ್.ವಡರಟ್ಟಿ ಸ್ವಾಗತಿಸಿದರು. ಎಂ.ಎಸ್. ಬೆಳಗಲಿ ವಂದಿಸಿದರು. ಕೊನೆಗೆ ಸಿಹಿ ವಿತರಿಸಲಾಯಿತು.

## ಮಕ್ಕಳ ಪುಸ್ತಕ ಚಂದಿರ ಪ್ರಶಸ್ತಿ: ಅರ್ಜಿ ಆಹ್ವಾನ

ಬೆಳಗಾವಿ: ಕರ್ನಾಟಕ ರಾಜ್ಯ ಬಾಲವಿಕಾಸ ಅಕಾಡೆಮಿಯಿಂದ 2022 ನೇ ಸಾಲಿನಲ್ಲಿ ಮಕ್ಕಳ ಕ್ಷೇತ್ರದಲ್ಲಿ ರಚಿಸಲ್ಪಟ್ಟ ಉತ್ತಮ ಪುಸ್ತಕಗಳಿಗೆ "ಮಕ್ಕಳ ಪುಸ್ತಕ ಚಂದಿರ ಪ್ರಶಸ್ತಿ ಪ್ರಧಾನ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಯಾ ಸಾಲಿನ ಅವಧಿ ಜನೇವರಿ ಯಿಂದ ಡಿಸೆಂಬರ ತಿಂಗಳ ಅಂತ್ಯದ ಅವಧಿಯಲ್ಲಿ ಪ್ರಕಟಗೊಂಡ ಸ್ವರಚಿತ ಕವನ ಸಂಕಲನ, ಕಥಾ ಸಂಕಲನ ನಾಟಕ (ಪಠ್ಯಾಧಾರಿತ ಬಿಟ್ಟು ಮಕ್ಕಳ ಕಾದಂಬರಿ, ವೈಜ್ಞಾನಿಕ ಲೇಖನಗಳ ಸಂಕಲನ, ಅನುವಾದಿತ ಕೃತಿ, (ಯಾವುದೇ ಪ್ರಕಾರದ ಮಕ್ಕಳ ಸಾಹಿತ್ಯ) ಮಕ್ಕಳ ಸಾಹಿತ್ಯ ವಿಮರ್ಶಾ ಕೃತಿ ಹೀಗೆ 7 ಪ್ರಕಾರದ ಮಕ್ಕಳ ಸಾಹಿತ್ಯದ ಕೃತಿಗಳ ಪ್ರಶಸ್ತಿಗಾಗಿ ಅಹ್ವಾನಿಸಲಾಗಿದೆ.

ಕ್ಷೇತ್ರಗಳಲ್ಲಿ ಪ್ರಕಟಗೊಂಡ ಪುಸ್ತಕಗಳನ್ನು ಪ್ರಶಸ್ತಿಗಾಗಿ ಪರಿಗಣಿಸಲು, ಮೌಲ್ಯಮಾಪನಗೊಳಿಸಲು ಪ್ರತಿಯೊಂದು ಕೃತಿಯ 4 ಪ್ರತಿಗಳನ್ನು ಹಾಗೂ ಸ್ವವಿವರಗಳನ್ನೊಳಗೊಂಡ ಮನವಿಯೊಂದಿಗೆ ಡಿ. 4 2023 ರೊಳಗಾಗಿ ಅಕಾಡೆಮಿಯ ಕೇಂದ್ರ ಕಛೇರಿ ವಿಳಾಸಕ್ಕೆ ಪೋಸ್ಟ ಮುಖಾಂತರ ಕಳುಹಿಸಬಹುದು. ನಂತರ ಬಂದ ಅರ್ಜಿಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮಾನದಂಡಗಳನ್ನು ಕಛೇರಿಯ ವೆಬ್‌ಸೈಟ್ http://balavikasaacademy. karnataka.gov.in/ ನಲ್ಲಿ ವೀಕ್ಷಿಸಬಹುದಾಗಿದೆ ಹಾಗೂ ಕಚೇರಿಯ ವಿಳಾಸ ಚಂದ್ರಿಕಾ ಲೇ ಔಟ್ ಹಿಂಭಾಗ ಕೆ.ಎಚ್ ಬಿ ಕಾಲೋನಿ, ಲಕಮನಹಳ್ಳಿ, ಧಾರವಾಡ-580004 ಅಥವಾ ದೂರವಾಣಿ ಸಂಖ್ಯೆ 0836-2465490 ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಕ್ರೀಡಾ ಸ್ಪರ್ಧೆಗಳ ಆಯೋಜನೆ

ಧಾರವಾಡ: ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಧಾರವಾಡ ಜಿಲ್ಲೆಯ ಎಲ್ಲ ವಿಕಲಚೇತನರಿಗೆ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ನವೆಂಬರ್ 20 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಹುಬ್ಬಳ್ಳಿಯ ರೈಲ್ವೆ ಆಟದ ಮೈದಾನದಲ್ಲಿ ಕ್ರೀಡಾಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಕ್ರೀಡಾಕೂಟದಲ್ಲಿ ಎಲ್ಲಾ ವಿಕಲಚೇತನರು ಸಕ್ರೀಯವಾಗಿ ಭಾಗವಹಿಸಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದು, ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂರವಾಣಿ ಸಂಖ್ಯೆ:0836-2744474ನ್ನು ಸಂಪರ್ಕಿಸಬಹುದೆಂದು ಪ್ರಕಟಣೆ ತಿಳಿಸಿದೆ.

# ಸಂಸತ್ ಅಧಿವೇಶನದಂತೆ ನಡೆದ ಯುವ ಸಂಸತ್ ಸ್ಪರ್ಧೆ

ಶಿವಮೊಗ್ಗ: ಆಡಳಿತ ಪಕ್ಷದ ವಿಷಯ ಮಂಡನೆಗಳು, ವಿರೋಧ ಪಕ್ಷದ ಪ್ರಶ್ನೆ ಮತ್ತು ಚರ್ಚೆಗಳು, ಪರ ವಿರೋಧದ ಅಲೆಗಳು ಒಟ್ಟಾರೆ ಯುವ ಸಂಸತ್ತಿನ ಕಲಾಪಗಳು ಸಂಸತ್ತಿನ ಅಧಿವೇಶನವನ್ನು ನೆನಪಿಸುಂತಿತ್ತು.

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಕರ್ನಾಟಕ ಸರ್ಕಾರದ ಸಚಿವಾಲಯ ಬೆಂಗಳೂರು ಹಾಗೂ ಜಿಲ್ಲಾ ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪ್ರೌಢಶಾಲಾ ವಿಭಾಗದ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಯುವ ಸಂಸದೀಯ ಪಟುಗಳು ಉತ್ತಮವಾಗಿ ತಮ್ಮ ಪಾತ್ರ ನಿರ್ವಹಣೆ ಮಾಡಿದರು.

ಮಾಸೂರು ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿಯಾದ ನವ್ಯ ಕೆ.ಜಿ ಸಭಾಪತಿಯಾಗಿ ಉತ್ತಮವಾಗಿ ಅಧಿನವೇನದ ಕಲಾಪಗಳನ್ನು ನಡೆಸಿಕೊಟ್ಟರು.

ಆರಂಭದಲ್ಲಿ ರಾಜಕಾರಣಿ ಸುಭದ್ರಮ್ಮನವರಿಗೆ ಆಡಳಿತ ಮತ್ತು ವಿರೋಧ ಪಕ್ಷದ ನಾಯಕರು ಸಂತಾಪ ಸೂಚಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ವಿರೋಧ ಪಕ್ಷದ ಸದಸ್ಯರು ಗೃಹಲಕ್ಷ್ಮಿ ಯೋಜನೆಯಡಿ ಇನ್ನೂ ಹಲವಾರು ಮಹಿಳಾ ಫಲಾನುಭವಿಗಳ ಖಾತೆಗೆ ಹಣ ಮಂಜೂರಾಗಿಲ್ಲ. ತಮ್ಮದು ಕೇವಲ ಹುಸಿ ಭರವಸೆ ನೀಡುವ ಸರ್ಕಾರ ಎಂದು ಮೂದಲಿಸಿದರು.

ಸುಭಾಷ್ನಗರ ಸರ್ಕಾರಿ ಪ್ರೌಢಶಾಲೆಯ ಭೂಮಿಕಾ ಮುಖ್ಯಮಂತ್ರಿ ಪಾತ್ರ ನಿರ್ವಹಿಸಿ, ನಮ್ಮದು ಮೌಲ್ಯಾಧಾರಿತ ರಾಜಕಾರಣ. ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದ್ದು, ಹಂತ ಹಂತವಾಗಿ ಎಲ್ಲ ಅರ್ಹ ಫಲಾನುಭವಿಗಳ ಖಾತೆಗೆ ಗೃಹಲಕ್ಷ್ಮಿ ಹಣ ಜಮೆಯಾಗಲಿದೆ ಎಂದು ಸಮರ್ಥಿಸಿಕೊಂಡರು.

ವಿರೋಧಪಕ್ಷದ ಸದಸ್ಯರು ಜಿಲ್ಲೆಯ ರಸ್ತೆಗಳಲ್ಲಿ ಗುಂಡಿ-ಗೊಟರುಗಳು ಬಿದ್ದಿದ್ದು ಹಾಳಾಗಿವೆ. ದೂರದರ್ಶಿತ್ವವಿಲ್ಲದೆ ಕಳಪೆ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ರಸ್ತೆಗಳ ನಿರ್ವಹಣೆಗೆ ಏನು ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಶ್ನಿಸಿದರು. ಲೋಕೋಪಯೋಗಿ ಸಚಿವರು ಉತ್ತರಿಸಿ, ತಮ್ಮ ಸರ್ಕಾರದ ಅವಧಿಯಲ್ಲಿ ನಿರ್ಮಿಸಿದ ರಸ್ತೆಗಳ ಕಥೆ ಹೀಗೆ ಆಗಿದೆ. ನಾವು ಉತ್ತಮ ರಸ್ತೆಗಳನ್ನು



ನಿರ್ಮಿಸಲು ಯೋಜನೆಯನ್ನು ರೂಪಿಸಿಕೊಂಡಿದ್ದೇವೆ. ನಮ್ಮ ಸರ್ಕಾರ ಬಂದಾಗಿನಿಂದ ಅಪಘಾತಗಳ ಸಂಖ್ಯೆ ತೀರಾ ಕಡಿಮೆಯಾಗಿದೆ ಎಂದುತ್ತರಿಸಿದರು.

ಶಿಕ್ಷಣ ಮಂತ್ರಿಗಳನ್ನುದ್ದೇಶಿಸಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ 55 ಸಾವಿರ ಶಿಕ್ಷಕರ ಕೊರತೆ ಇದೆ. ಇದಕ್ಕೆ ಸರ್ಕಾರದ ಕ್ರಮ ಏನು? ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಕಡಿಮೆ ಇದೆ. ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ತೆಗೆದುಕೊಂಡ ಕ್ರಮದ ಬಗ್ಗೆ ಓರ್ವವಿರೋಧ ಪಕ್ಷದ ಸದಸ್ಯರು ಪ್ರಶ್ನಿಸಿದರೆ, ಮತ್ತೋರ್ವ ಸದಸ್ಯರು ಎಸ್‌ಎಸ್‌ಎಲ್ಸಿ ಯಲ್ಲಿ ಮೂರು ಪ್ರಯತ್ನದ ಪರೀಕ್ಷೆ ಅಗತ್ಯವಿತ್ತೇ, ಜಿಪಿಟಿ ಶಿಕ್ಷಕರಿಗೆ ಜವಾಬ್ದಾರಿ ನೀಡುತ್ತಿಲ್ಲ ಹಾಗೂ ಇಂಗ್ಲಿಷ್ ಮಾಧ್ಯಮದಲ್ಲಿ ಶಿಕ್ಷಕರ ಕೊರತೆ ಇದೆ. ಈ ಬಗ್ಗೆ ಕ್ರಮ ಏನು ಎಂದು ಪ್ರಶ್ನಿಸಿದರು.

ವಿರೋಧ ಪಕ್ಷದ ನಾಯಕಿ ಶೃತಿ ಎಸ್, 8ನೇ ತರಗತಿ ವಿದ್ಯಾರ್ಥಿಗಳಿಗೆ ಬೈಸಿಕಲ್ ನೀಡುತ್ತಿಲ್ಲ. ಕೇವಲ ಭರವಸೆ ನೀಡಿದರೆ ಸಾಲದು, ಅದನ್ನು ಜಾರಿಗೊಳಿಸಬೇಕೆಂದರು

ಹಳೆಸೊರಬ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ನಿದಾ ನಾಜ್ ಶಿಕ್ಷಣಮಂತ್ರಿಯಾಗಿ ಉತ್ತರಿಸಿ, ಹಂತ ಹಂತವಾಗಿ ಶಾಲಾ ಶಿಕ್ಷಕರನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ. ಹಾಗೂ ಅತಿಥಿ ಶಿಕ್ಷಕರನ್ನು ನೇಮಿಸಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಕಡಿಮೆ ಇಲ್ಲ. ಕೆಲವು ಕಡೆ ಮಾತ್ರ ಸಮಸ್ಯೆ ಇದ್ದು ಅಲ್ಲಿ ಮಕ್ಕಳು ಶಾಲೆಗೆ ಬರಲು ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷೆ ನಡೆಸಿ, ಶಾಲೆಗೆ ದಾಖಲು ಮಾಡಲಾಗುತ್ತಿದೆ. ಮಧ್ಯಾಹ್ನದ ಬಿಸಿಯೂಟ, ಮೊಟ್ಟೆ, ಶೂ, ಪುಸ್ತಕ ಹೀಗೆ ಎಲ್ಲ ಉಚಿತವಾಗಿ ನೀಡಲಾಗುತ್ತಿದ್ದು ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ ಎಂದ ಅವರು ವಿರೋಧ ಪಕ್ಷದ ನಾಯಕರ ಪ್ರಶ್ನೆಗೆ ಕೊರೊನಾ ವೇಳೆ ತಮ್ಮ ಸರ್ಕಾರಾವಧಿಯಲ್ಲೇ ಸೈಕಲ್ ವಿತರಣೆ ನಿಲ್ಲಿಸಲಾಗಿತ್ತು, ಇದೀಗ ಮತ್ತೆ ಸೈಕಲ್ ವಿತರಣೆಗೆ ಕ್ರಮ ವಹಿಸಲಾಗುವುದು ಎಂದು ಉತ್ತರಿಸಿದರು.

ವಿರೋಧಪಕ್ಷದ ಸದಸ್ಯರೋರ್ವರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಿದೆ. ಹಾಗೂ ಕಲುಷಿತ ನೀರು ಸರಬರಾಜಿನಿಂದ ಜನರು ಅಸ್ವಸ್ಥಗೊಂಡು ಆಸ್ಪತ್ರೆ ಸೇರಿದ್ದಾರೆ ಇದಕ್ಕೆ ಏನು ಕ್ರಮ ಕೈಗೊಂಡಿದ್ದೀರೆಂದು ಪ್ರಶ್ನಿಸಿದರು.

ಸಂಬಂಧಿಸಿದ ಸಚಿವರು, ಕುಡಿಯುವ ನೀರಿಗೆ ಸದ್ಯಕ್ಕೆ ಕೊರತೆ ಇಲ್ಲ. ಮನೆ ಮನೆ ಗಂಗಾ ಯೋಜನೆ ಮೂಲಕ ಪ್ರತಿ ಮನೆಗೆ ನಲ್ಲಿ ಹಾಕಿಸಿ ನೀರು ನೀಡಲಾಗುತ್ತಿದೆ. ಇನ್ನು ಕಲುಷಿತ ನೀರು ಸರಬರಾಜಿಗೆ ಕಾರಣವಾದ ಪೈಪ್ಲೈನ್ಗಳನ್ನು ಸರಿಪಡಿಸಲಾಗಿದೆ. ಕುಡಿಯುವ ನೀರಿನ ಸಮಸ್ಯೆ ಉದ್ಭವಿಸುವ ಊರುಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುವುದು ಎಂದರು.

ಕಾವೇರಿ ನದಿ ನೀರನ್ನು ಹೊರರಾಜ್ಯಕ್ಕೆ ಹರಿಸುವ ಸಂಬಂಧ ಮುಖ್ಯಮಂತ್ರಿಗಳು ಸ್ವತಃ ತಾವೇ ನಿರ್ಧಾರ ಕೈಗೊಂಡು ರಾಜ್ಯಕ್ಕೆ ಮೋಸವಾಗುತ್ತಿದೆ ಎಂದು ದೂರಿದರು. ಮುಖ್ಯಮಂತ್ರಿಗಳು ಉತ್ತರಿಸಿ, ಕಾವೇರಿ ನೀರಿನ ಸಮಸ್ಯೆ ಇಂದಿನದಲ್ಲ. ದಶಕಗಳ ಕಾಲದ ಸಮಸ್ಯೆ. ಹಾಗೂ ನಮ್ಮ ಸರ್ಕಾರ ನಮ್ಮ ಜನತೆ ಮತ್ತು ರೈತರಿಗೆ ಅನ್ಯಾಯ ಆಗುವ ರೀತಿ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಸ್ಪಷ್ಟನೆ ನೀಡಿದರು.

ವಿರೋಧ ಪಕ್ಷದ ಸದಸ್ಯರ ಪ್ರಶ್ನೆಗಳಿಗೆ ಆರೋಗ್ಯ ಸಚಿವರು ಉತ್ತರಿಸಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವುದೇ ಸೌಲಭ್ಯಗಳ ಕೊರತೆ ಇಲ್ಲ. ಜಿಲ್ಲಾಸ್ಪತ್ರೆಯಲ್ಲಿ ಸ್ಪೆಷಾಲಿಟಿ ಸೌಲಭ್ಯವೂ ಇದೆ. ಔಷಧಿಗಳ ಸಾಕಷ್ಟು ಲಭ್ಯತೆ ಇದ್ದು ಯಾರೂ ಹೊರಗಡೆ ಮಾತ್ರೆಗಳನ್ನು ತೆಗೆದುಕೊಳ್ಳಬಾರದೆಂದು ಸೂಚಿಸಲಾಗಿದೆ.

ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ ಇಂದಿಗೂ ನಿವಾರಣೆಯಾಗಿಲ್ಲ ಈ ಬಗ್ಗೆ ಕ್ರಮದು ಕುರಿತು ವಿರೋಧ ಪಕ್ಷದ ಸದಸ್ಯರು ಪ್ರಶ್ನಿಸಿದಾಗ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಉತ್ತರಿಸಿ, ಎಲ್ಲ ಕಡೆ ಬಾಲ್ಯವಿವಾಹ ತಡೆಗೆ ಕ್ರಮ ವಹಿಸಲಾಗಿದೆ. ಬಾಲ್ಯ ವಿವಾಹ ಹಾಗೂ ಬಾಲ ಕಾರ್ಮಿಕ ಪದ್ಧತಿ ವಿರುದ್ದ ದಾಳಿ ನಡೆಸಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಎಂದರು.

ಗಾಂಜಾ, ತಂಬಾಕು ಇತರೆ ಮಾದಕ ವ್ಯಸನ ತಡೆಗೆ ಗೃಹಸಚಿವರು ಏನು ಕ್ರಮ ಕೈಗೊಂಡಿದ್ದಾರೆಂದು ವಿರೋಧಪಕ್ಷದ ನಾಯಕರು ಪ್ರಶ್ನಿಸಿದರು.

ಸಚಿವರು ಉತ್ತರಿಸಿ, ಕೋಟ್ಪಾ ಮತ್ತು ಸಂಬಂಧಿಸಿದ ಕಾಯ್ದೆಯಡಿ ದಾಳಿ ನಡೆಸಿ ಪ್ರಕರಣ ದಾಖಲಿಸಿ ದಂಡ ಮತ್ತು ಶಿಕ್ಷೆ ವಿಧಿಸಲಾಗುತ್ತಿದೆ. ಅರಿವು ಕಾರ್ಯಕ್ರಮಗಳು, ತಂಬಾಕು ಮುಕ್ತ ಶಾಲೆಗಳ ಘೋಷಣೆ ಮಾಡಲಾಗುತಿದೆ ಎಂದರು.

ವಿಧೇಯಕ ಮಂಡನೆ ವೇಳೆ ಶರಾವತಿ ಮತ್ತು ಗೇರುಸೊಪ್ಪ ಅಭಯಾರಣ್ಯ ಸ್ಥಾಪನೆಯಿಂದ ಜೈವಿಕ ವ್ಯವಸ್ಥೆ ಸುಧಾರಣೆಯೊಂದಿಗೆ ಸಿಂಗಳೀಕದಂತಹ ಅಪರೂಪದ ಪ್ರಾಣಿಗಳ ರಕ್ಷಣೆಗೆ ಅನುಕೂಲವಾಗುತ್ತದೆ ಎಂಬ ವಿಧೇಯ ಮಂಡಿಸಿದರು. ಸದಸ್ಯರು ಈ ಬಗ್ಗೆ ತಮ್ಮ ಅಭಿಪ್ರಾಯ ಮಂಡಿಸಿ, ಅನುಮೋದಿಸಿದರು.

ಶೂನ್ಯವೇಳೆಯಲ್ಲಿ ವಿರೋಧ ಪಕ್ಷದ ನಾಯಕಿ ನಮ್ಮ ರಾಜ್ಯದ ಬರಗಾಲ ಪೀಡಿತ ಜಿಲ್ಲೆಗಳು ಮತ್ತು ಪರಿಹಾರಕ್ಕಾಗಿ ಕೈಗೊಂಡ ಕ್ರಮಗಳ ಬಗ್ಗೆ ಪ್ರಶ್ನಿಸಿದರು.

ಕಂದಾಯ ಸಚಿವರು ಉತ್ತರಿಸಿ, 151 ತಾಲ್ಲೂಕುಗಳನ್ನು ತೀವ್ರ ಬರಗಾಲ ಮತ್ತು 34 ತಾಲ್ಲೂಕುಗಳನ್ನು ಸಾಧಾರಣ ಒಟ್ಟು 195 ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಿ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಅಗತ್ಯವಿರುವೆಡೆ ಮೋಡ ಬಿತ್ತನೆ ಮಾಡಲಾಗಿದೆ. ಬೆಳೆ ಸಮೀಕ್ಷೆ, ಬೆಳೆ ವಿಮೆಯನ್ನು ಮಾಡಿಸಲಾಗಿದೆ ಎಂದರು.

# ಪ್ರಯಾಣಿಕರ ಬೆಲೆ ಬಾಳುವ ವಸ್ತುಗಳನ್ನ ಹಿಂತಿರುಗಿಸಿ ಮಾನವೀಯತೆ ಮೆರೆದ ಕಂಡಕ್ಟರ್



ಚಿಕ್ಕಬಳ್ಳಾಪುರ: ಈಗಿನ ಕಾಲದಲ್ಲಿ ಎಲ್ಲಾದರೂ ಬೆಲೆ ಬಾಳುವ ವಸ್ತುಗಳನ್ನ ಇಟ್ಟು ಸ್ವಲ್ಪ ಯಾಮಾರಿದ್ರೂ ಕ್ಷಣಾರ್ದದಲ್ಲಿ ಕದ್ದು ಪರಾರಿಯಾಗುತ್ತಾರೆ. ಇಂತಹ ಕಾಲದಲ್ಲಿ ಕೆಎಸ್ಆರ್ಟಿಸಿ ನಿರ್ವಾಹಕನೋರ್ವ ಬಸ್ನಲ್ಲಿ ಬಿಟ್ಟು ಹೋಗಿದ್ದ ಲಕ್ಷಾಂತರ ರೂಪಾಯಿ ಬೆಲೆ ಬಾಳುವ ವಸ್ತುಗಳನ್ನು ಮಾಲೀಕರಿಗೆ ತಲುಪಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಗೌರಿಬಿದನೂರು ಘಟಕದ ಕೆಎಸ್ಆರ್ಟಿಸಿ ಬಸ್ ನಿರ್ವಾಹಕ ಹಾಗೂ ಗುಡಿಬಂಡೆ ಮೂಲದ ಜಿ.ಎ. ಓಬಲೇಶ್ ಕರ್ತವ್ಯ ನಿರ್ವಹಿಸುತ್ತಿದ್ದರು. ಈ ವೇಳೆ ಪ್ರಯಾಣಿಕರೊಬ್ಬರು ಒಂದು ಲಾಪ್ ಟಾಪ್, ಐಫೋನ್, ಎರಡು ಸಾವಿರ ರೂಪಾಯಿ ಹಣ ಹಾಗೂ ದಾಖಲೆಗಳಿರುವ ಬ್ಯಾಗ್ ಅನ್ನು ಬಸ್ನಲ್ಲಿಯೇ ಮರೆತು ಬಿಟ್ಟು ಹೋಗಿದ್ದಾರೆ. ಇದನ್ನು ಗಮನಿಸಿದ ನಿರ್ವಾಹಕ ಓಬಲೇಶ್ ಬ್ಯಾಗ್ ಸುರಕ್ಷಿತವಾಗಿ ಇಟ್ಟುಕೊಂಡು ಅದರ ಮಾಲೀಕರಾದ ಕೃಷ್ಣಪ್ಪ ಎನ್ನುವವರನ್ನ ಗೌರಿಬಿದನೂರಿ ಘಟಕಕ್ಕೆ ಕರೆಸಿ ಎಲ್ಲರ ಸಮ್ಮುಖದಲ್ಲಿ ಬೆಲೆ ಬಾಳುವ ವಸ್ತುಗಳನ್ನ ಹಿಂತಿರುಗಿಸಿ ಮಾನವೀಯ ಮೆರೆದಿದ್ದಾರೆ.

ಇಷ್ಟೇ ಅಲ್ಲದೆ ಈ ಹಿಂದೆ ಹಲವು ಪ್ರಯಾಣಿಕರು ಅಮೂಲ್ಯವಾದ ವಸ್ತುಗಳಿರುವ ಬ್ಯಾಗ್ಗಳನ್ನು ಬಸ್ನಲ್ಲಿಯೇ ಬಿಟ್ಟು ಹೋಗಿದ್ದರು. ಅದನ್ನ ಕೂಡ ಓಬಲೇಶ್ ಅವರು ಮಾಲೀಕರಿಗೆ ಹಿಂತಿರುಗಿಸಿದ್ದಾರೆ. ಓಬಲೇಶ್ ಅವರ ಕಾರ್ಯಕ್ಕೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗಿದೆ.

# ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ

ಬೆಳಗಾವಿ: ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ನಿಮಿತ್ತ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ, ವರ್ಗಾವಣೆ, ತೆಗೆದು ಹಾಕುವಿಕೆಗಾಗಿ ನವೆಂಬರ್ 18, 19 ಮತ್ತು ಡಿಸೆಂಬರ್ 02, 03 2023 ರಂದು ವಿಶೇಷ ಅಭಿಯಾನ ನಡೆಸಲು ಎಲ್ಲಾ ಬಿ.ಎಲ್. ಓ ಗಳು ಅವರವರ ಮತಗಟ್ಟೆ ಕ್ಷೇತ್ರ ವ್ಯಾಪ್ತಿಯಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆವರೆಗೆ ಹಾಜರಿದ್ದು, ಸಾರ್ವಜನಿಕರಿಗೆ ಅಗತ್ಯ ನೆರವು ಒದಗಿಸುತ್ತಾರೆ.

ಸದರಿ ದಿನಗಳಂದು ಜರುಗುವ ವಿಶೇಷ ಆಂದೋಲನದ ಪ್ರಯೋಜನೆಯನ್ನು ಸಾರ್ವಜನಿಕರು ಪಡೆದುಕೊಳ್ಳಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುರುವಿನ ಗುರಿ ಸರ್ಕಾರಿ ಶಾಲೆಗಳಗೆ ಮುಟ್ಟಲಿ



ಕೆಂಭಾವಿ: ಮಕ್ಕಳಲ್ಲಿ ಶ್ರಮದಾನ, ಪಾಲಕರ ಮತ್ತು ಆದರ್ಶ ಶಿಕ್ಷಕ, ಸರಕಾರಿ ಶಾಲೆಗಳಲ್ಲಿ ಮೌಲ್ಯಯುತ ಶಿಕ್ಷಣವನ್ನು ಎತ್ತಿಹಿಡಿಯು ಪರಿಕಲ್ಪನೆಯಲ್ಲಿ ಲೆಮನ್ ಪರಶುರಾಮ್ ರವರ ಕಥೆ, ಅವರದೇ ನಟನೆ ಮತ್ತು ನಿರ್ದೇಶನದಲ್ಲಿ ಗುರುವಿನ ಗುರಿ ಕಿರು ಚಿತ್ರ ಸಾಮೂಹಿಕ ಆದರ್ಶ ಹೊತ್ತು ತಂದಿದೆ ಎಂದು ಪ್ರಧಾನ ಗುರು ಬಂದೇನವಾಜ್ ನಾಲ್ತವಾಡ ಹೇಳಿದರು.

ಪಟ್ಟಣದ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ಲಿಮ್ಕಾ ದಾಖಲೆಯ, ನಿರ್ದೇಶಕ ಲೆಮನ್ ಪರಶುರಾಮ ರವರ ಸಾಕ್ಷ್ಯಾ ಚಿತ್ರ ಗುರುವಿನ ಗುರಿ ಶುಕ್ರವಾರ ಇಲ್ಲಿನ ಶಾಲಾ ಮಕ್ಕಳಿಗಾಗಿ ಉಚಿತ ಪ್ರದರ್ಶನ ಸಂದರ್ಭದಲ್ಲಿ ಮಕ್ಕಳೊಂದಿಗೆ ಚಿತ್ರ ವೀಕ್ಷಣೆ ಮಾಡಿ ಮಾತನಾಡಿದ ಅವರು ಖಾಸಗಿ ಶಾಲೆಗಳಿಗಿಂತ ಸರಕಾರಿ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಯಾವುದರಲ್ಲಿ ಕಡಿಮೆ ಇಲ್ಲ ಎಂಬ ಶೈಕ್ಷಣಿಕ ಸಂದೇಶ ಸಾರುವ ಜೊತೆಗೆ ವಿದ್ಯಾರ್ಥಿಗಳ ಬೆಳವಣಿಗೆಯಲ್ಲಿ ತಂದೆ ತಾಯಿ ಪೋಷಕರು ಮತ್ತು ಶಿಕ್ಷಕರ ಪಾತ್ರ ಎತ್ತಿ ತೋರಿಸುವುದೇ ಗುರುವಿನ ಗುರಿ ಚಿತ್ರದ ಸದುದ್ದೇಶವಾಗಿದೆ ಎಂದು ಹೇಳಿದರು.

ನಿರ್ದೇಶಕ ನಟ ಲೇಮನ್ ಪರುಶುರಾಮ ಮಾತನಾಡಿ ಎಸ್.ಆರ್. ಪಾಟೀಲ್ ಹಾಗೂ ಬಸವರಾಜ್ ಪೂಜಾರ ನಿರ್ಮಾಣದಲ್ಲಿ ಮೂಡಿಬಂದ ಈ ಸಾಕ್ಷ್ಯಚಿತ್ರದಲ್ಲಿ ಸ್ಥಳೀಯ ಕಲಾವಿದರನ್ನು ಬಳಸಿಕೊಂಡಿದ್ದು, ವಿಶೇಷವಾಗಿ ಸರ್ಕಾರಿ ಶಾಲಾ ಮಕ್ಕಳಿಗಾಗಿ ನಿರ್ಮಿಸಿದ್ದು, ರಾಜ್ಯಾದ್ಯಂತ ಎಲ್ಲಾ ಶಾಲೆಗಳಿಗೂ ಪ್ರದರ್ಶನ ನೀಡುವ ಹಂಬಲ ನನ್ನದಾಗಿದೆ ಇಲಾಖೆ ಹಾಗೂ ಸರ್ಕಾರ ಸಹಕಾರ ನೀಡುವ ಅವಶ್ಯಕತೆ ಇದೆ ಎಂದರು. ಇದೇ ಸಂದರ್ಭದಲ್ಲಿ ಚಿತ್ರದ ಪೋಸ್ಟರ್ ಅನಾವರಣಗೊಳಿಸಲಾಯಿತು. ಶಾಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಸೇರಿದಂತೆ ಇತರರು ಇದ್ದರು.

## ಸೆಲ್ಕೋ ಸಂಸ್ಥೆಯಿಂದ ಸೌರ ಸ್ವದ್ಯೋಗ ಸಮ್ಮೇಳನ

# ಆರ್ಥಿಕ ಅಭಿವೃದ್ಧಿಗೆ ಸೌರ ಸ್ವದ್ಯೋಗ ಸಹಕಾರಿ: ಜಿಪಂ ಸಿಇಓ ಹರ್ಷಲ್ ಬೋಯರ್




ಬೆಳಗಾವಿ:"ವಿಶೇಷಚೇತನ ಮಹಿಳೆಯರು ಆರ್ಥಿಕವಾಗಿ ಅಭಿವೃದ್ಧಿಯಾಗಲು ಸೌರ ಉದ್ಯೋಗ ಸಹಕಾರಿಯಾಗಲಿದೆ. ಸೌರ ಉದ್ಯೋಗ ಸೃಷ್ಟಿಸುತ್ತಿರುವ ಸೆಲ್ಕೋ ಸಂಸ್ಥೆಯ ಕಾರ್ಯ ಶ್ಲಾಘನೀಯ" ಎಂದು ಜಿಪಂ ಸಿಇಓ ಹರ್ಷಲ್ ಬೋಯರ್ ಹೇಳಿದರು.

ಇಲ್ಲಿನ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಸೆಲ್ಕೋ ಸಂಸ್ಥೆಯ ವತಿಯಿಂದ ಆಯೋಜಿಸಲಾದ ವಿಶೇಷಚೇತನರ ಸೌರ ಸ್ವಉದ್ಯೋಗ ಸಮ್ಮೇಳನಕ್ಕೆ ಚಾಲನೆ ನೀಡಿ, ಮಾತನಾಡಿದರು.

ವಿಶೇಷಚೇತನ ಮಹಿಳೆಯರಿಗಾಗಿ ಮೊದಲ ಪ್ರಯತ್ನ ಮಾಡಲಾಗಿದೆ. ಇದಕ್ಕೆ, ನಿಮ್ಮ ಪರಿಶ್ರಮ ಬಹಳ ಮುಖ್ಯವಾಗಿದೆ. ಸೌರ ಸ್ವ ಉದ್ಯೋಗದಿಂದ ಮಹಿಳೆಯರ ಸಮಸ್ಯೆಗಳು ದೂರವಾಗಿಸಿ, ಅಭಿವೃದ್ಧಿ ಹೊಂದಲು ಅನುಕೂಲವಾಗಿದೆ ಎಂದರು.

ಸೆಲ್ಕೋ ಸಂಸ್ಥೆಯ ಉಪ ಮಹಾಪ್ರಬಂಧಕರಾದ ಪ್ರಸನ್ನ ಹೆಗಡೆ ಅವರು ಮಾತನಾಡಿ, ಸೌರಶಕ್ತಿಯು ಕೇವಲ ಬೆಳಕು ನೀಡುವುದಲ್ಲದೆ ಜೀವನ ಕಟ್ಟಿಕೊಡುವಲ್ಲಿ ಮಹತ್ತರ ಪಾತ್ರ ವಹಿಸುತ್ತಿದೆ. ಗ್ರಾಮೀಣ ಭಾಗದ ಕಟ್ಟಕಡೆ ವ್ಯಕ್ತಿಗೂ ಸೌರಶಕ್ತಿಯನ್ನು ತಲುಪಿಸುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಜಂಟಿನಿರ್ದೇಶಕ ಶಿವನಗೌಡ ಪಾಟೀಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಆರ್.ನಾಗರಾಜ, ಸೆಲ್ಕೋ ಫೌಂಡೇಷನ್ ಉಪ ಪ್ರಧಾನ ವ್ಯವಸ್ಥಾಪಕ ಪ್ರಸನ್ನ ಹೆಗಡೆ, ಹಿರಿಯ ಕಾರ್ಯಕ್ರಮ ನಿರ್ದೇಶಕಿ ಆರ್.ಸುರಭಿ, ಹಿರಿಯ ಯೋಜನಾ ವ್ಯವಸ್ಥಾಪಕ ವೀರೇಶ ತಡಹಾಳ,ರಮೇಶ ಗೊಂಗಡಿ, ಮಹಾಂತೇಶ ಅಗ್ನಿಮುಂಡಿ, ಸೆಲ್ಕೋ ಫೌಂಡೇಷನ್‌ಹಿರಿಯ ನಿರ್ವಾಹಕರಾದ ಸುರಭಿ ರಾಜಗೋಪಾಲ್, ನಾಗೇಶ ರಾವ್, ಯೋಜನಾ ವ್ಯವಸ್ಥಾಪಕ ಪ್ರಕಾಶ ಮೇಟಿ ಇತರರಿದ್ದರು. ವಲಯ ವ್ಯವಸ್ಥಾಪಕ ವಿನಾಯಕ ಹೆಗಡೆ ಕಾರ್ಯಕ್ರಮ ನಿರೂಪಿಸಿದರು.

# ವೃದ್ಧಾಶ್ರಮದ ಹಿರಿಯರೊಂದಿಗೆ ದೀಪಾವಳಿ ಆಚರಣೆ




ಬೆಳಗಾವಿ: ದೀಪಾವಳಿ ಹಬ್ಬದ ನಿಮಿತ್ಯ ಜೈನ ಇಂಟರ್‌ನ್ಯಾಷನಲ್ ಟ್ರೆಡ್ ಆರ್ಗನೈಝೇಶನ ಜಿತೋ ಸಂಸ್ಥೆಯ ವತಿಯಿಂದ ಬಸವನ ಕುಡಚಿಯಲ್ಲಿರುವ ನಾಗನೂರು ಶ್ರೀ. ಶಿವಬಸವ ಟ್ರಸ್ಟ ಸಂಚಾಲಿತ ಶ್ರೀಮತಿ ಚಿನ್ನಮ್ಮ ಬಸವಂತಯ್ಯಾ ಹಿರೇಮಠ ವೃದ್ಧಾಶ್ರಮದಲ್ಲಿ ಇತ್ತಿಚಿಗೆ ವೃದ್ಧಾಶ್ರಮದ ಹಿರಿಯರೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿತೋ ಚೇರಮನ್ ವೀರಧವಲ ಉಪಾಧ್ಯೆ ಅವರು, ನಾವೆಲ್ಲರೂ ನಮ್ಮ ಮನೆಯಲ್ಲಿ ಹಿರಿಯರೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸುತೇವೆ. ಎಲ್ಲ ಸಮಾಜದ ವರ್ಗದವರು ದೀಪಾವಳಿ ಹಬ್ಬವನ್ನು ಸಡಗರದಲ್ಲಿ ಆಚರಿಸುತ್ತಾರೆ. ಆದರೆ ಆಶ್ರಮದಲ್ಲಿರುವ ಹಿರಿಯರ ಜೊತೆ ದೀಪಾವಳಿ ಹಬ್ಬವನ್ನು ಆಚರಿಸಬೇಕೆಂಬ ಬಯಕೆಯೊಂದಿಗೆ ನಾವಿಂದು ನಿಮ್ಮ ಜೊತೆ ದೀಪಾವಳಿ ಹಬ್ಬವನ್ನು ಆಚರಿಸಿಕೊಳ್ಳುತ್ತಿದ್ದೇವೆ. ತಾವೆಲ್ಲರೂ ನಮಗೆ ಹಿರಿಯರ ಸಮಾನ. ನಾವು ಸಹ ನಿಮ್ಮ ಮನೆ ಮಕ್ಕಳು ಎಂದು ಭಾವಿಸಿ ನಮ್ಮೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸಿರಿ ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಆಶ್ರಮದಲ್ಲಿದ್ದ ಹಿರಿಯರಿಗೆ ಸಿಹಿ ತಿಂಡಿಗಳನ್ನು ವಿತರಿಸಲಾಯಿತು. ಇದರ ಜೊತೆಗೆ ಆಶ್ರಮಕ್ಕೆ 1500 ಲೀ. ಸಾಮರ್ಥ್ಯದ ನೀರಿನ ಟ್ಯಾಂಕನ್ನು ಸಹ ನೀಡಲಾಯಿತು. ಜಿತೋ ಸಂಸ್ಥೆಯ ಕಾರ್ಯದರ್ಶಿ ಸಂಜೀವ ದೊಡ್ಡಣ್ಣವರ, ಸದಸ್ಯ ಕುಂತಿನಾಥ ಕಲಮನಿ ,ಕಾರ್ಯಕ್ರಮ ಸಂಯೋಜಕ ಸುನಿಲ ಬಸ್ತವಾಡ ಯುವ ಘಟಕದ ಅಧ್ಯಕ್ಷ ದೀಪಕ ಸುಬೇದಾರ , ಪ್ರನಾಥ ಪಾಟೀಲ, ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

# 108ನೇ ಕೆಎಲ್ಇ ಸಂಸ್ಥಾಪನಾ ದಿನ

ಬೆಳಗಾವಿ: ಶಿಕ್ಷಣ ವಂಚಿತ ಪ್ರದೇಶದಲ್ಲಿ ಸಪ್ತರ್ಷಿಗಳು ನೆಟ್ಟ ಸಸಿ ಇಂದು ಹೆಮ್ಮರವಾಗಿ ಬೆಳೆದು ನಿಂತಿರುವ ಕೆ.ಎಲ್.ಇ. ಸಂಸ್ಥೆ ಇಂದು 108 ನೇ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಿಕೊಳ್ಳುತ್ತಿದೆ.

ಈ ಸಂಸ್ಥಾಪನಾ ದಿನಾಚರಣೆಯು ಶನಿವಾರ 18 ನವೆಂಬರ್, 2023 ರಂದು ಮಧ್ಯಾಹ್ನ 2.00 ಗಂಟೆಗೆ ಬೆಳಗಾವಿಯ ಕೆಎಲ್ಇ ಸೆಂಟೀನ ರಿಕನ್ವೆನ್ಷನ್ ಸೆಂಟರ್, ಜೆಎನ್ಎಂಸಿ ಯಲ್ಲಿ ಜರುಗಲಿದೆ.

ಮುಖ್ಯ ಅತಿಥಿಗಳಾಗಿ ಮಹಾರಾಷ್ಟ್ರದ ಮುಂಬಯಿ ವಿಶ್ವವಿದ್ಯಾಲಯದ ಗೌರವಾನ್ವಿತ ಉಪಕುಲಪತಿಗಳಾದ ಡಾ.ರವೀಂದ್ರ ಡಿ. ಕುಲಕರ್ಣಿ ಅವರು ಆಗಮಿಸಲಿದ್ದಾರೆ.

ಕೆಎಲ್ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿ ಪಡೆದ ಕೆಎಲ್ಇ ಸಂಸ್ಥೆಯ ವಿದ್ಯಾರ್ಥಿಗಳನ್ನು ಹಾಗೂ ಶಿಕ್ಷಕರನ್ನು ಸನ್ಮಾನಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಕೆಎಲ್ಇ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮಹಾಂತೇಶ ಎಸ್. ಕೌಜಲಗಿಯವರು ವಹಿಸಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ಕೆಎಲ್ಇ ಆಡಳಿತ ಮಂಡಳಿಯ ಕಾರ್ಯದರ್ಶಿಗಳಾದ ಡಾ. ಬಿ.ಜಿ.ದೇಸಾಯಿಯವರು ತಿಳಿಸಿದ್ದಾರೆ.

# ಟಾಟಾ ಟೆಕ್ನಾಲಜೀಸ್ ಲಿಮಿಟೆಡ್‌ನ ಐಪಿಓ ಬಿಡುಗಡೆ




ಹುಬ್ಬಳ್ಳಿ: 16ನೇ ನವೆಂಬರ್ 2023: ಟಾಟಾ ಟೆಕ್ನಾಲಜೀಸ್ ಲಿಮಿಟೆಡ್, ಜಾಗತಿಕ ಎಂಜಿನಿಯರಿಂಗ್ ಮತ್ತು ಉತ್ಪನ್ನ ಅಭಿವೃದ್ಧಿ ಡಿಜಿಟಲ್ ಸೇವೆಗಳ ಕಂಪನಿ, ಆಗಿದ್ದು ನವೆಂಬರ್ 22, ಬುಧವಾರದಂದು 60,850,278 ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆ (ಐಪಿಓ) ತೆರೆಯಲು ಪ್ರಸ್ತಾಪಿಸಲಾಗಿದೆ.

ಬಿಡ್ ಮುಕ್ತಾಯ ದಿನಾಂಕ ಶುಕ್ರವಾರ, ನವೆಂಬರ್ 24, 2023 ಆಗಿರುತ್ತದೆ. ಆಂಕರ್ ಹೂಡಿಕೆದಾರರ ಬಿಡ್ಡಿಂಗ್ ದಿನಾಂಕವು ಬಿಡ್ ತೆರೆಯುವ ದಿನಾಂಕದ ಒಂದು ಕೆಲಸದ ದಿನದ ಮೊದಲಿಗೆ ನಿಗದಿ ಪಡಿಸಲಾಗಿದ್ದು, ನವೆಂಬರ್ 21, 2023 ಮಂಗಳವಾರ. ತೆರೆಯಲಾಗುತ್ತದೆ.

ಆಫರ್‌ನ ಬೆಲೆ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ ರೂ 475 ರಿಂದ ರೂ 500 ಕ್ಕೆ ನಿಗದಿಪಡಿಸಲಾಗಿದೆ. ಹೂಡಿಕೆದಾರರು ಕನಿಷ್ಠ 30 ಈಕ್ವಿಟಿ ಷೇರುಗಳು ಮತ್ತು 30 ಈಕ್ವಿಟಿ ಷೇರುಗಳ ಗುಣಕಗಳಿಗೆ ಬಿಡ್ ಮಾಡಬಹುದಾಗಿದೆ

ಕಂಪನಿಯ ಆರಂಭಿಕ ಸಾರ್ವಜನಿಕ ಕೊಡುಗೆಯು ನಗದಿನಲ್ಲಿ 60,850,278 ಈಕ್ವಿಟಿ ಷೇರುಗಳ ಮಾರಾಟದ ಪ್ರಸ್ತಾಪ ಒಳಗೊಂಡಿದೆ. ಆಫರ್ (ಎ) ಟಾಟಾ ಮೋಟಾರ್ಸ್ ಲಿಮಿಟೆಡ್‌ನಿಂದ 46,275,000 ಇಕ್ವಿಟಿ ಷೇರುಗಳ ಮಾರಾಟ, (ಬಿ) ಆಲ್ಫಾ ಟಿಸಿ ಹೋಲ್ಡಿಂಗ್ಸ್ ಪಿಟಿಇ ಲಿಮಿಟೆಡ್ ಮೂಲಕ 9,716,853 ಇಕ್ವಿಟಿ ಷೇರುಗಳ ಮಾರಾಟವನ್ನು ಒಳಗೊಂಡಿದೆ. ಮತ್ತು (c) ಟಾಟಾ ಕ್ಯಾಪಿಟಲ್ ಗ್ರೋತ್ ಫಂಡ್ I ನಿಂದ 4,858,425 ಇಕ್ವಿಟಿ ಷೇರುಗಳ ಮಾರಾಟ ನಡೆಯಲಿದೆ ಎಂದು ಕಂಪೆನಿ ಪ್ರಕಟಣೆ ತಿಳಿಸಿದೆ.

# ಕ್ರೀಡೆಯಿಂದ ದೈಹಿಕ, ಮಾನಸಿಕ ಆರೋಗ್ಯ ವೃದ್ಧಿ: ರಾಜಶ್ರೀ ಜೈನಾಪೂರ

## 20 ವಿಕಲಚೇತನ ಯುವತಿಯರಿಗೆ ವೀಲ್ಚ್ ಚೇರ್ ವಿತರಣೆ



ಬೆಳಗಾವಿ: "ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಮನಸ್ಸಿಗೆ ಉಲ್ಲಾಸ ಸಿಗುವುದಲ್ಲದೆ, ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿ ಆಗುತ್ತದೆ. ಸರ್ಕಾರ ಅನೇಕ ಯೋಜನೆಗಳನ್ನು ತಂದಿದೆ. ಈ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ರಾಷ್ಟ್ರ ಮಟ್ಟದಲ್ಲಿ ಮಿಂಚಬೇಕು" ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಕುಲಸಚಿವರಾದ ರಾಜಶ್ರೀ ಜೈನಾಪೂರ ಹೇಳಿದರು.

ಇಲ್ಲಿನ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ ಬೆಂಗಳೂರಿನ ಮೋಟಿವೇಶನ್ ಇಂಡಿಯಾ ಸಂಸ್ಥೆ, ವೋಲಕಾರ್ಟ್ ಫೌಂಡೇಶನ್ ಇಂಡಿಯಾ ಟ್ರಸ್ಟ್ ಮತ್ತು ಬೆಳಗಾವಿಯ ವಿಶ್ವಾಸ ಫೌಂಡೇಶನ್ ಸಂಸ್ಥೆ ವತಿಯಿಂದ ರಾಜ್ಯದ ವಿವಿಧ 20 ವಿಕಲಚೇತನ ಯುವತಿಯರಿಗೆ ವೀಲ್ಚ್ ಚೇರ್ ಉಚಿತವಾಗಿ ವಿತರಿಸಿ ಅವರು ಮಾತನಾಡಿದರು.

ವಿಕಲಚೇತನ ಮಹಿಳಾ ಕ್ರೀಡಾಪಟ್ಟುಗಳ ಬ್ಯಾಸ್ಕೆಟ್ಬಾಲ್ ವೀಲ್ಚೇರ ಕಾರ್ಯಕ್ರಮಕ್ಕೆ ಭಾಗವಹಿಸಿರುವುದು ನನ್ನ ಜೀವನದ ಅತ್ಯಂತ ಪ್ರಮುಖ ಕಾರ್ಯಕ್ರಮವಾಗಿದೆ. ಎಲ್ಲಾ ಕ್ರೀಡಾಪಟ್ಟುಗಳು ಉತ್ತಮ ಸಾಧನೆ ಮಾಡಬೇಕು ಎಂದು ಶುಭಹಾರೈಸಿದರು.

ಕ್ರೀಡಾ ಇಲಾಖೆ ಉಪ ನಿರ್ದೇಶಕರಾದ ಬಿ.ಶ್ರೀನಿವಾಸ್ ಅವರುಮಾತನಾಡಿ, ನಿಮ್ಮಲ್ಲಿರುವ ವಿಶೇಷತೆಯನ್ನು ಕಂಡು ವಿಶೇಷಚೇತನರು ಎಂದು ನಾಮಕರಣ ಮಾಡಲಾಗಿದೆ.

ಇದು ಮತ್ತಷ್ಟು ವೃದ್ಧಿಯಗಬೇಕಾದರೆ ಕ್ರೀಡೆ ಮೇಲಿನ ನಿಮ್ಮ ಆಸಕ್ತಿ ಇನ್ನಷ್ಟು ಹೆಚ್ಚಾಗಬೇಕು. ವಿವಿಧ ಸಂಘ ಸಂಸ್ಥೆಗಳು ಮಾಡುವ ಸಹಾಯವನ್ನು ಉಪಯೋಗ ಮಾಡಿಕೊಂಡು ಉತ್ತುಂಗ ಮಟ್ಟದಲ್ಲಿ ಬೆಳೆಯಬೇಕು ಎಂದು ಪ್ರೋತ್ಸಾಹಿಸಿದರು.

ಬೆಳಗಾವಿ ಜಿಲ್ಲಾಧಿಕಾರಿಗಳ ಸಹಕಾರದೊಂದಿಗೆ ಬೆಳಗಾವಿಯಲ್ಲಿ ವಿಕಲಚೇತನ ಕ್ರೀಡಾ ವಸತಿ ನಿಲಯ ಸ್ಥಾಪಿಸಲು ಸರ್ಕಾರದಿಂದ ಸಾದ್ಯವಾದಷ್ಟು ಸಹಕಾರ ಮತ್ತು ನೆರವನ್ನು ನೀಡಲಾಗುವುದು ಎಂದು ತಿಳಿಸುತ್ತಾ, ರಾಷ್ಟ್ರೀಯ ವೀಲ್ಚ ಚೇರ್ ಬ್ಯಾಸ್ಕೆಟ್ಬಾಲ್ ಆಯ್ಕೆಯಾದ ಎಲ್ಲ ಮಹಿಳಾ ಹಾಗೂ ಪುರುಷ ಕ್ರೀಡಾಪಟ್ಟುಗಳಿಗೆ ಶುಭ ಹಾರೈಸಿದರು.

ಮೌಂಟೇಶನ್ ಇಂಡಿಯಾದ ಪ್ರವೀಣಕುಮಾರ, ಪ್ರಶಾಂತ್, ದಿನೇಶ್ ಎಲ್, ಕಾತ್ಯಾಯಾನಿ, ಜಿಲ್ಲಾ ಅಂಗವಿಕಲ ಅಧ್ಯಕ್ಷ ಮಾಹಾಂತೇಶ ಹೊಂಗಲ್, ವಿಶ್ವಾಸ್ ಫೌಂಡೇಶನ್ ಅಧ್ಯಕ್ಷ ಜಗದೀಶ್ ಬಡಗೇರ್, ಉಪಾಧ್ಯಕ್ಷ ಸಂತೋಷ ಜೋಶಿ, ಹಾಗು ಕಾರ್ಯದರ್ಶಿಯಾದ ಕು.ಬಸಪ್ಪ ಸುಣದೊಳಿ. ಮತ್ತು ಮಹಿಳಾ ಹಾಗೂ ಪುರುಷ ಬ್ಯಾಸ್ಕೆಟ್ಬಾಲ್ ಕ್ರೀಡಾ ತರಬೇತಿದಾರ ವ್ಹಿ.ಎಸ್.ಪಾಟೀಲ್ ರವರು ಮತ್ತು ಮಾರುತಿ ಕರಿಯವರ. ಸುರಜ್, ಸಂಗೀತಾ.ಮಂಜುಳಾ, ಮಾಯವ್ವ, ಸೋಮಶೇಖರ್, ಫಕ್ಕೀರಪ್ಪ, ಆರತಿ , ಈರಣ್ಣ, ಹಾಗು ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕ್ರೀಡಾಪಟ್ಟುಗಳು ಇತರರು ಇದ್ದರು. ಮೌಂಟೇಶನ್ ಇಂಡಿಯಾದ ಸುಧಾಕರ ನಿರೂಪಿಸಿದರು. ಲಕ್ಷ್ಮೀ ವಂದಿಸಿದರು.

# ಗಡಿಭಾಗದಲ್ಲಿ ಕನ್ನಡ ಕಟ್ಟಿ ಬೆಳೆಸಿದ ಚಿಂಚಣಿ ಶ್ರೀಗಳ ಪರಂಪರೆ ಮುಂದುವರಿಯಲಿ: ಗವಿಮಠರ ಆಶಯ



ಬೆಳಗಾವಿ: ಗಡಿಭಾಗದಲ್ಲಿ ನಿರಂತರವಾಗಿ ಕನ್ನಡಪರ ಕೆಲಸಗಳನ್ನು ಮಾಡುತ್ತ , ಕನ್ನಡ ಸಾಹಿತಿಗಳನ್ನು ಗುರುತಿಸಿ ಗೌರವಿಸುತ್ತ, ಕನ್ನಡ ನಾಡುನುಡಿಗೆ ಅಪಾರ ಸೇವೆ ಸಲ್ಲಿಸುತ್ತ ಬಂದ ಚಿಂಚಣಿ ಶ್ರೀ ಅಲ್ಲಮಪ್ರಭು ಮಹಾಸ್ವಾಮಿಗಳ ಅಕಾಲಿಕ ನಿಧನ ಕನ್ನಡಕ್ಕಾದ ಬಹು ದೊಡ್ಡ ನಷ್ಟ" ಎಂದು ಹಿರಿಯ ಸಾಹಿತಿ, ಶಿಕ್ಷಣ ತಜ್ಞ ಶ್ರೀ ಬಿ. ಎಸ್. ಗವಿಮಠ ಅವರಿಂದಿಲ್ಲಿ ಹೇಳಿದರು.

ಬೆಳಗಾವಿಯ ಸಾಹಿತಿಗಳ ಮತ್ತು ಸಾಹಿತ್ಯ ಸಂಘಟನೆಗಳ ಪರವಾಗಿ ಕನ್ನಡ ಸಾಹಿತ್ಯ ಭವನದಲ್ಲಿಂದು ಕರೆಯಲಾದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಗವಿಮಠ ಅವರು ಚಿಂಚಣಿ ಮಠದಲ್ಲಿ ಕನ್ನಡದ ಈ ಪರಂಪರೆ ಮುಂದುವರಿಯುವಂತಾಗ ಬೇಕೆಂದೂ ಆಶಿಸಿದರು.

ಡಾ. ಬಸವರಾಜ ಜಗಜಂಪಿ, ಪ್ರೊ. ಎಂ. ಎಸ್. ಇಂಚಲ, ಎಲ್. ಎಸ್. ಶಾಸ್ತ್ರಿ, ಡಾ. ರಾಮಕೃಷ್ಣ ಮರಾಠೆ, ಶಿರೀಷ ಜೋಶಿ, ಅಶೋಕ ಚಂದರಗಿ, ಎ. ಬಿ. ಘೋಟಗೆ, ಆರ್. ಬಿ. ಬನಶಂಕರಿ, ಬಸವರಾಜ ಗಾರ್ಗಿ, ಡಾ. ಪಿ. ಜಿ. ಕೆಂಪಣ್ಣವರ, ಮುರುಗೇಶ ಶಿವಪೂಜಿ, ಆರ್. ಬಿ. ಬನಶಂಕರಿ, ಆರ್. ಬಿ. ಕಟ್ಟಿ ಮೊದಲಾದವರು ಚಿಂಚಣಿ ಶ್ರೀಗಳವರ ಜತೆಗಿನ ಒಡನಾಟದ ಕ್ಷಣಗಳನ್ನು ನೆನಪಿಸಿಕೊಂಡು, ಗಡಿಯಲ್ಲಿ ಕನ್ನಡ ಮರಾಠಿ ಜನರ ನಡುವೆ ಸಾಮರಸ್ಯ ಬೆಳೆಸುತ್ತಲೇ ಕನ್ನಡದ ವಾತಾವರಣವನ್ನು ನಿರ್ಮಿಸಿದ ಶ್ರೀಗಳು ಎಲ್ಲರ ಪ್ರೀತಿ ಗೌರವ ಗಳಿಸಿಕೊಂಡಿದ್ದರಲ್ಲದೇ ಚಿತ್ರಕಲೆ, ಪುರಾತನ ವಸ್ತುಗಳ ಸಂಗ್ರಹ, ಬೊನ್ಸಾಯ್ ಗಿಡಗಳನ್ನು ಬೆಳೆಸುವುದೂ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಆಸಕ್ತಿ ಹೊಂದಿದವರಾಗಿದ್ದರೆಂಬುದನ್ನು ಸ್ಮರಿಸಿಕೊಂಡರು. ಒಂದು ನಿಮಿಷ ಮೌನವನ್ನು ಆಚರಿಸಿ ಶ್ರೀಗಳ ಆತ್ಮಕ್ಕೆ ಶಾಂತಿ ಕೋರಲಾಯಿತು.

# ಕೌಶಲ್ಯ ಆಧಾರಿತ ಶಿಕ್ಷಣದಿಂದ ಉದ್ಯೋಗಕ್ಕೆ ರಹದಾರಿ: ಡಾ. ಎಂ. ಜಯಪ್ಪ



ಬೆಳಗಾವಿ: ರಾಷ್ಠೊಥಯ ಶಿಕ್ಷಣ ನೀತಿಯಡಿ ಪ್ರತಿಯೊಬ್ಬ ಪದವಿ ವಿದ್ಯಾರ್ಥಿ ಮಾರುಕಟ್ಟೆಯ ಬೇಡಿಕೆಗನುಗುಣವಾಗಿ ತನ್ನ ಪದವಿ ಹಂತದಲ್ಲಿ ಕೌಶಲ್ಯ ಆಧಾರಿತ ವಿಷಯಗಳನ್ನು ಅಧ್ಯಯನ ಕೈಗೊಳ್ಳಬೇಕಾಗುತ್ತದೆ.

ಈಗಾಗಲೇ 'ಡಿಜಿಟಲ್ ಆರ್ಟಿಫಿಸಿಯಲ್ ಇಂಟೆಲಿಜೆನ್ಸ್' ಹಾಗೂ ಫೈನಾನ್ಸಿಯಲ್ ಎಜಿಕೇಶನ್' ಕೌಶಲ್ಯ ಆಧಾರಿತ ಕೋರ್ಸ್ಗಳನ್ನು ವಿದ್ಯಾರ್ಥಿಗಳು ಪದವಿ ಹಂತದಲ್ಲಿ ಕಡ್ಡಾಯವಾಗಿ ಕಲಿಯುತ್ತಿದ್ದು, ಪ್ರಸ್ತುತ ಸಾಲಿನಲ್ಲಿ 5ನೇ ಸೆಮಿಸ್ಟರ್‌ಗೆ 'ಸೈಬರ್ ಸೆಕ್ಯುರಿಟಿ' ಜೊತೆಗೆ 'ಎಂಪ್ಲಾಯಬಿಲಿಟಿ ಸ್ಕಿಲ್ಸ್' (ಉದ್ಯೋಗ ಕೌಶಲ್ಯ) ಎಂಬ ವಿಷಯವನ್ನು ಪರಿಚಯಮಾಡಲಾಗಿದೆ. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್‌ನ ವಿಶೇಷಾಧಿಕಾರಿಗಳಾದ ಡಾ. ಎಂ. ಜಯಪ್ಪ ಅವರು ಕರೆ ನೀಡಿದರು.

ಶುಕ್ರವಾರ ದಿನಾಂಕ 17/11/2023 ರಂದು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಹಾಗೂ ಬೆಳಗಾವಿಯ ಗೊಗಟೆ ಕಾಮರ್ಸ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಗೊಗಟೆ ಕಾಲೇಜಿನ ಕೆ.ಕೆ. ವೇಣುಗೋಪಾಲ್ ಸಭಾಂಗಣದಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜಿನ ಶಿಕ್ಷಕರಿಗೆ "ಉದ್ಯೋಗ ಕೌಶಲ್ಯ" ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ಸಯ್ಯದ್ ಸದತ್‌ಪಾಷಾ ಅವರು 'ಸರ್ಕಾರಿ ಕ್ಷೇತ್ರದಲ್ಲಿ ಉದ್ಯೋಗವಕಾಶಗಳು ಹಾಗೂ ಅವಶ್ಯವಿರುವ ಕೌಶಲ್ಯಗಳು' ಹಾಗೂ ಶ್ರೀಮತಿ ಮಂಜುಳಾ ಕುದರಿ ಅವರು 'ಸಂವಹನ ಕೌಶಲ್ಯ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಾಗಾರದ ಅಧ್ಯಕ್ಷತೆಯನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ರವೀಂದ್ರನಾಥ್ ಕದಮ ಮಾತನಾಡಿ ಮಾರುಕಟ್ಟೆಯ ಬೇಡಿಕೆ ಹಾಗೂ ಪಠ್ಯಕ್ರಮದ ನಡುವಿನ ಅಂತರವನ್ನು ಈ ಕೌಶಲ್ಯ ಆಧಾರಿತ ಕೋರ್ಸ್ಗಳು ಮಾಡುತ್ತದ್ದು ವಿದ್ಯಾರ್ಥಿಗಳಿಗೆ ಅನೂಕೂಲವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಾಗಾರವನ್ನು ಗೊಗಟೆ ಕಾಲೇಜಿನ ಪ್ರಾಚಾರ್ಯರಾದ ಡಾ. ಹೆಚ್.ಹೆಚ್. ವೀರಾಪೂರ ಸ್ವಾಗತಿಸಿದರು. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ತರಬೇತಿ ಹಾಗೂ ಉದ್ಯೋಗ ಕೋಶದ ನಿರ್ದೇಶಕರಾದ ಪ್ರೊ. ಆರ್. ಎನ್. ಮನಗೂಳಿ ಅವರು ಪ್ರಾಸ್ತಾವಿಕ ನುಡಿದರು.

ಡಾ. ಅಶ್ವಿನಿ ಜಾಮೂನಿ ನಿರೂಪಿಸಿ, ಶ್ರೀಮತಿ ದೇವತಾ ಗಸ್ತಿ ವಂದಿಸಿದರು. ಕಾರ್ಯಾಗಾರದಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜಿನ ಶಿಕ್ಷಕರು ಹಾಗೂ ಗೊಗಟೆ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಂಪುಟ: 4 ಸಂಚಿಕೆ: 242 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089